ಸಂಪುಟ: 11 ಸಂಚಿಕೆ: 156 ಪುಟ: 4+2 ಬೆಲೆ : 3.00 ಶುಕ್ರವಾರ ಜುಲೈ 24, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 156 Pages : 4+2 Rate : 3.00 Friday July 24, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

### ಗಜೇಂದ್ರಗಡದಲ್ಲಿ ಭಗವಾನ್ ಮಹಾವೀರ ಜೈನ್ ಆಯುರ್ವೇದ ವೈದ್ಯಕೀಯ ಕಾಲೇಜಿನ ಘಟಿಕೋತ್ಸವದಲ್ಲಿ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್

# ಆಯುರ್ವೇದ ವಿಶ್ವಕ್ಕೆ ಭಾರತದ ಅಮೂಲ್ಯ ಕೊಡುಗೆ

**ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಆಯುರ್ವೇದ ಮತ್ತು ಯೋಗವು ಭಾರತವು ವಿಶ್ವಕ್ಕೆ ನೀಡಿರುವ ಅಮೂಲ್ಯ ಕೊಡುಗೆಗಳಾಗಿದ್ದು, ನಮ್ಮ ಪ್ರಾಚೀನ ವೈದ್ಯಕೀಯ ಜ್ಞಾನವನ್ನು ಆಧುನಿಕ ತಂತ್ರಜ್ಞಾನದೊಂದಿಗೆ ಸಂಯೋಜಿಸಿ ಜಗತ್ತಿನ ಮುಂದೆ ಪರಿಣಾಮಕಾರಿಯಾಗಿ ಪರಿಚಯಿಸುವ ಅಗತ್ಯವಿದೆ ಎಂದು ಕರ್ನಾಟಕ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಹೇಳಿದರು.

ಪಟ್ಟಣದ ಟಿಟಿಡಿ ಕಲ್ಯಾಣ ಮಂಟಪದಲ್ಲಿ ಬಾಗಮಾರ ಸೇವಾ ಸಮಿತಿಯ ಭಗವಾನ್ ಮಹಾವೀರ ಜೈನ್ ಆಯುರ್ವೇದಿಕ್ ಮೆಡಿಕಲ್ ಕಾಲೇಜು, ಆಸ್ಪತ್ರೆ ಹಾಗೂ ಸ್ನಾತಕೋತ್ತರ ಕೇಂದ್ರದ ಘಟಿಕೋತ್ಸವ ಉದ್ಘಾಟಿಸಿ ಅವರು ಮಾತನಾಡಿದರು.

ಕರ್ನಾಟಕವು ಆಯುರ್ವೇದ, ಯೋಗ ಹಾಗೂ ಪ್ರಕೃತಿ ಚಿಕಿತ್ಸಾ ಕ್ಷೇತ್ರದಲ್ಲಿ ದೇಶದಲ್ಲಿಯೇ ಮುಂಚೂಣಿಯಲ್ಲಿದ್ದು, ರಾಜ್ಯದ ವೈದ್ಯಕೀಯ ಶಿಕ್ಷಣ ಸಂಸ್ಥೆಗಳು ಸಾವಿರಾರು ಯುವಕರ ಭವಿಷ್ಯ ರೂಪಿಸುತ್ತಿವೆ. ಭಾರತೀಯ ಸಂಸ್ಕೃತಿಯಲ್ಲಿ ವೈದ್ಯರನ್ನು ದೇವರ ಸ್ವರೂಪವೆಂದು ಪರಿಗಣಿಸಲಾಗಿದ್ದು, ವೈದ್ಯಕೀಯ ವೃತ್ತಿಯ ಮೂಲ ಉದ್ದೇಶ ಸೇವೆಯಾಗಿರಬೇಕು ಎಂದು ಹೇಳಿದರು. ಆಯುರ್ವೇದವು ಕೇವಲ ರೋಗ ನಿವಾರಣೆಯ ವೈದ್ಯಕೀಯ ಪದ್ಧತಿಯಲ್ಲ, ಆರೋಗ್ಯಕರ ಜೀವನಶೈಲಿಯನ್ನು ಬೆಳೆಸುವ ವೈಜ್ಞಾನಿಕ



ವ್ಯವಸ್ಥೆಯಾಗಿದೆ. ಇಂದಿನ ಜೀವನಶೈಲಿಯಿಂದ ಉಂಟಾಗುತ್ತಿರುವ ಅನೇಕ ಕಾಯಿಲೆಗಳಿಗೆ ಆಯುರ್ವೇದ ಪರಿಣಾಮಕಾರಿ ಪರಿಹಾರ ನೀಡಬಲ್ಲದು ಎಂದು ಅಭಿಪ್ರಾಯಪಟ್ಟರು.

ಆಯುರ್ವೇದ ವಿದ್ಯಾರ್ಥಿಗಳು ಜ್ಞಾನ, ಕೌಶಲ್ಯ, ಕರುಣೆ ಹಾಗೂ ಸೇವಾ ಮನೋಭಾವವನ್ನು ಮೈಗೂಡಿಸಿಕೊಂಡು ರೋಗಿಗಳ ಸೇವೆಯಲ್ಲಿ ತೊಡಗಬೇಕು. ಭಗವಾನ್ ಮಹಾವೀರರ ಸತ್ಯ ಮತ್ತು ಅಹಿಂಸೆಯ ಸಂದೇಶವನ್ನು ಜೀವನದಲ್ಲಿ ಅಳವಡಿಸಿಕೊಂಡು ಸಮಾಜದ ಆರೋಗ್ಯ ರಕ್ಷಣೆಗೆ ತಮ್ಮನ್ನು ಸಮರ್ಪಿಸಬೇಕು ಎಂದು ಕರೆ ನೀಡಿದರು.

ಘಟಿಕೋತ್ಸವದಲ್ಲಿ ಪದವಿ ಪಡೆದ ವಿದ್ಯಾರ್ಥಿಗಳಿಗೆ ರಾಜ್ಯಪಾಲರು ಪ್ರಮಾಣಪತ್ರಗಳನ್ನು ವಿತರಿಸಿ ಅಭಿನಂದಿಸಿದರು. ಘಟಿಕೋತ್ಸವದ ಪ್ರಮಾಣವಚನವನ್ನು ಕಾಲೇಜಿನ ಪ್ರಾಚಾರ್ಯ ಡಾ. ನಾರಾಯಣರಾವ್ ಕುಲಕರ್ಣಿ ಬೋಧಿಸಿದರು.

ಸಂಸ್ಥೆಯ ಕಾರ್ಯದರ್ಶಿ ಅಜಿತಕುಮಾರ ಬಾಗಮಾರ ಮಾತನಾಡಿ, ಶಿಕ್ಷಣದ ಜೊತೆಗೆ ಸಂಸ್ಕಾರ ನೀಡುವುದು ಸಂಸ್ಥೆಯ ಧ್ಯೇಯವಾಗಿದೆ. ವಿದ್ಯಾರ್ಥಿಗಳು ತಂದೆ-ತಾಯಿ ಹಾಗೂ ಗುರುಗಳ ಋಣವನ್ನು ಮರೆಯದೆ ಸಮಾಜಮುಖಿ ಸೇವೆ ಸಲ್ಲಿಸಬೇಕು ಎಂದು ಸಲಹೆ ನೀಡಿದರು.

ಸಂಸ್ಥೆಯ ಅಧ್ಯಕ್ಷ ಅಶೋಕಕುಮಾರ ಬಾಗಮಾರ ಮಾತನಾಡಿ, ಸೇವಾ ಮನೋಭಾವ ಹಾಗೂ ನಿರಂತರ ಪರಿಶ್ರಮದಿಂದ ಉನ್ನತ ಸ್ಥಾನಕ್ಕೇರಬಹುದು ಎಂಬುದಕ್ಕೆ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಅವರ ಬದುಕೇ ಮಾದರಿಯಾಗಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಸಂಸ್ಥೆಯ ನಿರ್ದೇಶಕರಾದ ಸಂದೀಪ ಖಿಂವಸಾರ, ತಾರಾಬಾಯಿ ಬಾಗಮಾರ, ವರ್ಧಮಾನ್ ಬಾಗಮಾರ, ಪ್ರಾಚಾರ್ಯ ಡಾ. ನಾರಾಯಣರಾವ್ ಕುಲಕರ್ಣಿ, ಕೆ.ಎಸ್. ಪಲ್ಲೇದ, ಡಾ. ಶ್ರೀನಿವಾಸ ಬೆಳಗೇರಿ, ಡಾ. ಪೂರ್ಣಿಮಾ ಜೀರೆ, ಎ.ಡಿ. ಕೋರ್ಲ್ಕ, ಡಾ. ಸ್ವಿ.ಬಿ. ಇನಾಮದಾರ, ಅಭಿನಂದನ್ ಪಾಟೀಲ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> **ಆಯುರ್ವೇದ ಮತ್ತು ಯೋಗವು ಭಾರತವು ವಿಶ್ವಕ್ಕೆ ನೀಡಿರುವ ಅಮೂಲ್ಯ ಕೊಡುಗೆಗಳಾಗಿವೆ. ಆಧುನಿಕ ತಂತ್ರಜ್ಞಾನದೊಂದಿಗೆ ಅವುಗಳನ್ನು ಸಂಯೋಜಿಸಿ ವಿಶ್ವದ ಮುಂದೆ ಮತ್ತಷ್ಟು ಪರಿಣಾಮಕಾರಿಯಾಗಿ ಪರಿಚಯಿಸುವ ಅಗತ್ಯವಿದೆ.**
> **- ಥಾವರಚಂದ್ ಗೆಹ್ಲೋಟ್,** ಕರ್ನಾಟಕ ರಾಜ್ಯಪಾಲ

### ಪುರಸಭೆ ಸಾಮಾನ್ಯ ಸಭೆಯಲ್ಲಿ ಕೊಳಚೆ ಪ್ರದೇಶಗಳ ಅಭಿವೃದ್ಧಿ, ನಿವೇಶನ ಪರವಾನಗಿ, ಒಳಚರಂಡಿ ಯೋಜನೆ ಕುರಿತು ಬಿಸಿ ಚರ್ಚೆಯಲ್ಲಿ ಅಧ್ಯಕ್ಷೆ ಸೂಚನೆ

## ಮೂಲಸೌಕರ್ಯ ಕಾಮಗಾರಿಗೆ ವಿಳಂಬ ಬೇಡ

**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪಟ್ಟಣದ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳನ್ನು ಅನಗತ್ಯವಾಗಿ ವಿಳಂಬ ಮಾಡದೆ ತ್ವರಿತವಾಗಿ ಪೂರ್ಣಗೊಳಿಸಬೇಕು ಎಂದು ಪುರಸಭೆ ಅಧ್ಯಕ್ಷೆ ರೇಷ್ಮಾ ಸಿಕಂದರ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಪಟ್ಟಣದ ಪುರಸಭೆ ಸಭಾಂಗಣದಲ್ಲಿ ನಡೆದ ಪುರಸಭೆಯ ಮುಂದುವರಿದ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕಳೆದ ಜುಲೈ 15ರಂದು ಅಪೂರ್ಣಗೊಂಡಿದ್ದ ಸಾಮಾನ್ಯ ಸಭೆಯನ್ನು ಮುಂದುವರಿಸಿ ವಿವಿಧ ಅಭಿವೃದ್ಧಿ ಕಾಮಗಾರಿಗಳು ಹಾಗೂ ಆಡಳಿತಾತ್ಮಕ ವಿಷಯಗಳ ಕುರಿತು ಸದಸ್ಯರೊಂದಿಗೆ ಸುದೀರ್ಘ ಚರ್ಚೆ ನಡೆಸಲಾಯಿತು. ಸಭೆಯಲ್ಲಿ ಕೊಳಚೆ ಪ್ರದೇಶಗಳ ಅಭಿವೃದ್ಧಿ ವಿಷಯ ಪ್ರಮುಖವಾಗಿ ಪ್ರಸ್ತಾಪವಾಯಿತು. ಈಗಾಗಲೇ ಗುರುತಿಸಿರುವ ಕೊಳಚೆ ಪ್ರದೇಶಗಳ ಅಭಿವೃದ್ಧಿಗೆ ಮತ್ತಷ್ಟು ವಿಳಂಬ ಮಾಡಬಾರದು ಎಂದು ಸದಸ್ಯ ಜನ್ನು ನಾಗರಾಜ್ ಆಗ್ರಹಿಸಿದರು. ಅಗತ್ಯವಿದ್ದರೆ ಸದಸ್ಯರೊಂದಿಗೆ ವಾರ್ಡ್‌ವಾರು ಸ್ಥಳ ಪರಿಶೀಲನೆ ನಡೆಸಿ ಅಂತಿಮಗೊಳಿಸುವಂತೆ ಸಲಹೆ ನೀಡಿದರು. ಇದಕ್ಕೆ ಸದಸ್ಯ ಬಿ.ಡಿ. ಗಂಗಣ್ಣ ಆಕ್ಷೇಪ ವ್ಯಕ್ತಪಡಿಸಿದರು. ಬಳಿಕ ಮಧ್ಯಪ್ರವೇಶಿಸಿದ ಸದಸ್ಯ ಎಂ. ಮರಿರಾಮಪ್ಪ, ಈಗಾಗಲೇ ಆಯ್ಕೆಯಾಗಿರುವ ಏಳು ವಾರ್ಡ್‌ಗಳಲ್ಲಿ ಅಭಿವೃದ್ಧಿ ಕಾಮಗಾರಿ ಆರಂಭಿಸಿ, ಉಳಿದ ವಾರ್ಡ್‌ಗಳ ಸಮೀಕ್ಷೆಯನ್ನು ಕೊಳಚೆ ನಿರ್ಮೂಲನೆ ಮಂಡಳಿ ಹಾಗೂ ಪುರಸಭೆ ಸಿಬ್ಬಂದಿಯಿಂದ ನಡೆಸುವಂತೆ ಸಲಹೆ ನೀಡಿದರು. ಈ ಅಭಿಪ್ರಾಯಕ್ಕೆ ಅಧ್ಯಕ್ಷೆ ರೇಷ್ಮಾ ಸಿಕಂದರ್ ಸಮ್ಮತಿ ಸೂಚಿಸಿದರು. ಜಿಲ್ಲೆಯಲ್ಲಿ 111 ಕೊಳಚೆ ಪ್ರದೇಶಗಳನ್ನು ಗುರುತಿಸಲಾಗಿದ್ದು, ಕೂಡ್ಲಿಗಿ, ಕೊಟ್ಟೂರು ಹಾಗೂ ಹೂವಿನಹಡಗಲಿಯಲ್ಲಿ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಲಾಗಿದೆ. ಹಗರಿಬೊಮ್ಮನಹಳ್ಳಿಯ ಫಲಾನುಭವಿಗಳ ಪಟ್ಟಿ, ಎನ್‌ಒಸಿ, ಚೆಕ್‌ಬಂದಿ ಹಾಗೂ ಸ್ಕೆಚ್ ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸಬೇಕಿದೆ ಎಂದು ಮಾಹಿತಿ ನೀಡಿದರು. ಸಭೆಯಲ್ಲಿ ನಿವೇಶನ ಪರವಾನಗಿ ವಿತರಣೆಯ ವಿಷಯವೂ ಚರ್ಚೆಗೆ ಗ್ರಾಸವಾಯಿತು. ಏಕ ನಿವೇಶನಗಳ ಅರ್ಜಿಗಳು ಬಾಕಿ ಉಳಿದಿರುವಾಗ ಬಹು ನಿವೇಶನಗಳಿಗೆ ಪರವಾನಗಿ ನೀಡುತ್ತಿರುವ ಕ್ರಮದ ಬಗ್ಗೆ ಸದಸ್ಯ ಜೋಗಿ ಹನುಮಂತಪ್ಪ ಪ್ರಶ್ನೆ ಎತ್ತಿದರು. ಯಾವುದೇ ನಿವೇಶನಕ್ಕೆ ಪರವಾನಗಿ ನೀಡುವ ಮುನ್ನ ಸಾಮಾನ್ಯ ಸಭೆಯ ಗಮನಕ್ಕೆ ತರಬೇಕು ಎಂದು ಸದಸ್ಯ ಪವಾಡಿ ಹನುಮಂತಪ್ಪ ಸಲಹೆ ನೀಡಿದರು. ಏಕ ನಿವೇಶನಗಳ ವಿಷಯವನ್ನು ಮುಂದಿನ ಸಭೆಯಲ್ಲಿ ಚಆರ್‌ಸಿ ಸೂಕ್ತ ನಿರ್ಧಾರ ಕೈಗೊಳ್ಳಲಾಗುವುದು ಎಂದು ಅಧ್ಯಕ್ಷೆ ತಿಳಿಸಿದರು. ಬಿ. ಮುತ್ಕೂರು ಗ್ರಾಮದ ಬಳಿ ಮೂರು ಎಕರೆ ಜಾಗವನ್ನು ಕೊಳಚೆ ನೀರು ಶುದ್ಧೀಕರಣ ಘಟಕಕ್ಕೆ ಮೀಸಲಿಟ್ಟು ಒಳಚರಂಡಿ ನಿರ್ಮೂಲನೆ ಮಂಡಳಿಗೆ ಹಸ್ತಾಂತರಿಸಲಾಗಿದೆ ಎಂದು ಮುಖ್ಯಾಧಿಕಾರಿ ಎಂ.ಕೆ. ಮುಗುಳಿ ಮಾಹಿತಿ ನೀಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಸದಸ್ಯೆ ಕಮಲಮ್ಮ ಶಿವಮೊಗ್ಗ, ಮೊದಲು ಪಟ್ಟಣದ ಚರಂಡಿಗಳಲ್ಲಿ ನೀರು ಸಮರ್ಪಕವಾಗಿ ಹರಿಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಸಭೆಯ ವೇಳೆ ಬೀದಿಬದಿ ವ್ಯಾಪಾರಿಗಳ ಸಂಘದ ಅಧ್ಯಕ್ಷ ಮಂಜುನಾಥ, ರೋಷನ್, ಜೋಗಿ ನಾಗರಾಜ್ ಹಾಗೂ ಕೊಟ್ರೇಶ್ ವಿವಿಧ ಮೂಲಸೌಕರ್ಯ ಸೌಲಭ್ಯಗಳನ್ನು ಕಲ್ಪಿಸುವಂತೆ ಮನವಿ ಸಲ್ಲಿಸಿದರು. ಈ ಸಂದರ್ಭದಲ್ಲಿ ಉಪಾಧ್ಯಕ್ಷೆ ನೇತ್ರಾವತಿ ಸೆರಗಾರ್, ಸದಸ್ಯರಾದ ಇಸ್ಮಾಯಿಲ್ ತೆಲಗಿ, ರಾಜೇಶ್ ಬ್ಯಾಡಗಿ, ಅಂಬಿಕಾ ದೇವೇಂದ್ರಪ್ಪ, ಮಂಜುಳಾ ಕೃಷ್ಣನಾಯ್ಕ, ನವೀನ್ ಕುರ್ಮಾ, ಸುರೇಶ್ ಬಣಕಾರ, ಅಜೀಜುಲ್ಲಾ, ಮಂಗಳ ರವೀಂದ್ರಗೌಡ, ಬಡಲಡಕಿ ಕೃಷ್ಣಪ್ಪ, ಉಪ್ಪಾರ್ ಬಾಳಪ್ಪ, ಮುಖ್ಯಾಧಿಕಾರಿ ಮಾರೆಪ್ಪ ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

> **ಪಟ್ಟಣದಲ್ಲಿ ಕೊಳಚೆ ಪ್ರದೇಶಗಳನ್ನು ಗುರುತಿಸಿ ಅಭಿವೃದ್ಧಿಪಡಿಸುವ ಕೆಲಸವನ್ನು ಅನಗತ್ಯವಾಗಿ ವಿಳಂಬ ಮಾಡಬಾರದು. ಸಾರ್ವಜನಿಕರಿಗೆ ಮೂಲಸೌಕರ್ಯ ಕಲ್ಪಿಸುವಲ್ಲಿ ಅಧಿಕಾರಿಗಳು ಆದ್ಯತೆ ನೀಡಬೇಕು.**
> **- ರೇಷ್ಮಾ ಸಿಕಂದರ್,** ಅಧ್ಯಕ್ಷೆ, ಹಗರಿಬೊಮ್ಮನಹಳ್ಳಿ ಪುರಸಭೆ

### ಪ್ರಜಾಸೌಧ ನಿರ್ಮಾಣಕ್ಕೆ ತೆರವು ಆತಂಕ | ನಮಗೂ ಬದುಕುವ ಹಕ್ಕಿದೆ, ನೆಲೆ ಕಲ್ಪಿಸಿ ಎಂದು ಗುಡಿಸಲು ವಾಸಿಗಳ ಮನವಿ

## 40 ವರ್ಷಗಳಿಂದ ಗುಡಿಸಲು... ಇನ್ನೂ ಸ್ವಂತ ಸೂರು ಇಲ್ಲ!



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ನಾವೂ ನಿಮ್ಮಂತೆ ಮನುಷ್ಯರಲ್ಲವೇ? ನಮಗೂ ಈ ನೆಲದಲ್ಲಿ ಬದುಕುವ ಹಕ್ಕಿಲ್ಲವೇ?

ಇದು ಲಕ್ಷ್ಮೇಶ್ವರ ಪಟ್ಟಣದ ದೊಡ್ಡೂರ ರಸ್ತೆ ಪಕ್ಕದಲ್ಲಿ ಕಳೆದ ಹಲವು ವರ್ಷಗಳಿಂದ ಗುಡಿಸಲು ಕಟ್ಟಿಕೊಂಡು ಜೀವನ ಸಾಗಿಸುತ್ತಿರುವ ಹತ್ತಾರು ಕುಟುಂಬಗಳ ಹೃದಯವಿದ್ರಾವಕ ಪ್ರಶ್ನೆ.

ಪ್ರಜಾಸೌಧ ಕಟ್ಟಡ ನಿರ್ಮಾಣಕ್ಕಾಗಿ ತಾವು ವಾಸಿಸುತ್ತಿರುವ ಜಾಗವನ್ನು ತೆರವುಗೊಳಿಸುವ ಪ್ರಕ್ರಿಯೆ ಆರಂಭವಾಗಿರುವ ಹಿನ್ನೆಲೆಯಲ್ಲಿ, ನಮಗೆ ಸ್ವಂತ ಸೂರು ಕಲ್ಪಿಸದೇ ಮತ್ತೆ ಬೀದಿಗೆ ತಳ್ಳಬೇಡಿ ಎಂದು ಗುಡಿಸಲು ನಿವಾಸಿಗಳು ಸರ್ಕಾರ ಹಾಗೂ ಜನಪ್ರತಿನಿಧಿಗಳ ಮುಂದೆ ಮನವಿ ಮಾಡಿದ್ದಾರೆ.

ಸುಮಾರು 40 ವರ್ಷಗಳ ಹಿಂದೆ ಕಲಾಯಿ ಕೆಲಸಗಾರರು, ಸುಡಗಾಡ ಸಿದ್ದರು, ದುರ್ಗಮುರಿಗರು, ಮೋಡಿಕಾರರು, ಕುಂಚಿಕೋರರು, ಬಗರಿಕಾರರು ಸೇರಿದಂತೆ ಹಲವು ಸಮುದಾಯಗಳ ಕುಟುಂಬಗಳು ಉದ್ಯೋಗ ಅರಸಿ ಲಕ್ಷ್ಮೇಶ್ವರಕ್ಕೆ ವಲಸೆ ಬಂದಿದ್ದವು. ಆರಂಭದಲ್ಲಿ ಹಳೆಯ ಬಸ್ ನಿಲ್ದಾಣದ ಸುತ್ತಮುತ್ತ ನೆಲೆಸಿದ್ದ ಇವರನ್ನು ಅಲ್ಲಿಂದ ತೆರವುಗೊಳಿಸಿದ ಬಳಿಕ ಹೊಸ ಬಸ್ ನಿಲ್ದಾಣದ ಹಿಂಭಾಗದ ಕಂದಾಯ ಇಲಾಖೆಯ ಜಾಗಕ್ಕೆ ಸ್ಥಳಾಂತರಿಸಲಾಗಿತ್ತು. ಅಲ್ಲಿಂದಲೂ ತೆರವುಗೊಳಿಸಿದ ನಂತರ ಕಳೆದ ಹಲವು ವರ್ಷಗಳಿಂದ ದೊಡ್ಡೂರ ರಸ್ತೆ ಪಕ್ಕದ ಪುರಸಭೆ ಮೈದಾನದಲ್ಲಿ ಗುಡಿಸಲು ಹಾಕಿಕೊಂಡು ಬದುಕು ಸಾಗಿಸುತ್ತಿದ್ದಾರೆ.

ಈಗ ಇದೇ ಜಾಗದಲ್ಲಿ ಪ್ರಜಾಸೌಧ ನಿರ್ಮಾಣಕ್ಕೆ ಚಾಲನೆ ದೊರೆತಿರುವುದರಿಂದ ಮತ್ತೊಮ್ಮೆ ನಿರಾಶ್ರಿತರಾಗುವ ಭೀತಿ ಅವರನ್ನು ಕಾಡುತ್ತಿದೆ.

ಗುಡಿಸಲು ನಿವಾಸಿಗಳಲ್ಲಿ ಬಹುತೇಕರ ಬಳಿ ಆಧಾರ್ ಕಾರ್ಡ್, ಮತದಾರರ ಗುರುತಿನ ಚೀಟಿ, ಪಡಿತರ ಚೀಟಿ ಸೇರಿದಂತೆ ಎಲ್ಲಾ ಅಗತ್ಯ ದಾಖಲೆಗಳಿದ್ದರೂ, ಸ್ವಂತ ಸೂರಿನ ಕನಸು ಮಾತ್ರ ಇನ್ನೂ ನನಸಾಗಿಲ್ಲ. ಸರ್ಕಾರಗಳು ಗುಡಿಸಲು ಮುಕ್ತ ರಾಜ್ಯ, ಎಲ್ಲರಿಗೂ ಮನೆ, ಆರೋಗ್ಯ, ಶಿಕ್ಷಣ ಹಾಗೂ ಮೂಲಸೌಕರ್ಯಗಳ ಭರವಸೆ ನೀಡುತ್ತಾ ಬಂದರೂ, ತಮ್ಮ ಬದುಕಿನಲ್ಲಿ ಅದರ ಅನುಭವವಾಗಿಲ್ಲ ಎಂಬುದು ನಿವಾಸಿಗಳ ನೋವಾಗಿದೆ.

ಆದರೆ, ಈ ಪ್ರದೇಶದಲ್ಲಿ ವಾಸಿಸುವ ಕೆಲವರು ಬೇರೆಡೆ ಮನೆ ಹೊಂದಿದ್ದಾರೆ ಎಂಬ ಆರೋಪಗಳೂ ಕೇಳಿಬಂದಿವೆ. ಹೀಗಾಗಿ ನಿಜವಾದ ನಿವೇಶನ ರಹಿತ ಹಾಗೂ ನಿರಾಶ್ರಿತ ಕುಟುಂಬಗಳನ್ನು ಗುರುತಿಸಿ ಅವರಿಗೆ ಶಾಶ್ವತ ನೆಲೆ ಕಲ್ಪಿಸುವಂತೆ ಸಾರ್ವಜನಿಕರು ಆಗ್ರಹಿಸಿದ್ದಾರೆ.



> **ಬಾಲ್ಯದಿಂದಲೇ ಗುಡಿಸಲಿನಲ್ಲೇ ಬದುಕುತ್ತಿದ್ದೇವೆ. ಮತದಾರರ ಚೀಟಿ, ಆಧಾರ್, ರೇಷನ್ ಕಾರ್ಡ್ ಎಲ್ಲವೂ ಇದೆ. ಆದರೆ ಸ್ವಂತ ಮನೆ ಮಾತ್ರ ಸಿಕ್ಕಿಲ್ಲ. ಈಗ ಮತ್ತೆ ಇಲ್ಲಿಂದ ತೆರವುಗೊಳಿಸುತ್ತಿದ್ದಾರೆ. ನಾವು ಎಲ್ಲಿ ಹೋಗಬೇಕು? ನಮಗೂ ಒಂದು ಸೂರು ಕಲ್ಪಿಸಿ.**
> **- ಶಾಂತವ್ವ ಬಗರಕೇರ ಸೇರಿದಂತೆ ಗುಡಿಸಲು ನಿವಾಸಿಗಳು**

> **ಪ್ರಜಾಸೌಧ ನಿರ್ಮಾಣವಾಗಲಿರುವ ಜಾಗದಲ್ಲಿರುವ ಗುಡಿಸಲು ನಿವಾಸಿಗಳಿಗೆ ತಾತ್ಕಾಲಿಕವಾಗಿ ಬೇರೆಡೆ ಸ್ಥಳಾವಕಾಶ ಕಲ್ಪಿಸಲು ಸೂಚಿಸಲಾಗಿದೆ. ನಿಜವಾದ ನಿರಾಶ್ರಿತರಿಗೆ ಶಿಗ್ಲಿ ರಸ್ತೆ ಹಾಗೂ ಕ್ಯಾಂಪಿಗೆರೆ ಬಳಿಯ ಪುರಸಭೆ ಜಾಗದಲ್ಲಿ ಶಾಶ್ವತ ನೆಲೆ ಕಲ್ಪಿಸುವ ಕುರಿತು ಶಾಸಕರೊಂದಿಗೆ ಚಆರ್‌ಸಿ ಕ್ರಮ ಕೈಗೊಳ್ಳಲಾಗುವುದು.**
> **- ಧನಂಜಯ ಎಂ.,** ತಹಸೀಲ್ದಾರ್, ಲಕ್ಷ್ಮೇಶ್ವರ

### ನೀಟ್ ಪ್ರತಿಭಟನಾಕಾರರ ಮೇಲಿನ ಕ್ರಮ ಖಂಡಿಸಿದ ಆಮ್ ಆದ್ಮಿ ಪಕ್ಷ; ಕೇಂದ್ರ ಸರ್ಕಾರದ ವಿರುದ್ಧ ಡಾ. ದಾದಾಪೀರ ಕಲೆಗಾರ ವಾಗ್ದಾಳಿ

## ಮನ್ ಕಿ ಬಾತ್ ಅಲ್ಲ, ಯುವಕರ ದಿಲ್ ಕಿ ಬಾತ್ ಕೇಳಿ!

**ವಿಜಯಸಾಕ್ಷಿ ಸುದ್ದಿ, ಗದಗ**

ನೀಟ್ ಸೇರಿದಂತೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳ ಪ್ರಶ್ನೆಪತ್ರಿಕೆ ಸೋರಿಕೆ ಹಾಗೂ ಪರೀಕ್ಷಾ ಅಕ್ರಮಗಳನ್ನು ಖಂಡಿಸಿ ದೆಹಲಿಯ ಜಂತರ್ ಮಂತರ್‌ನಲ್ಲಿ ಪ್ರತಿಭಟನೆ ನಡೆಸುತ್ತಿದ್ದ ವಿದ್ಯಾರ್ಥಿಗಳ ಮೇಲೆ ಲಾಠಿ ಚಾರ್ಜ್, ಜಲಫಿರಂಗಿ ಹಾಗೂ ಅಶ್ರುವಾಯು ಪ್ರಯೋಗ ನಡೆಸಿರುವುದು ಪ್ರಜಾಪ್ರಭುತ್ವ ಮತ್ತು ಅಭಿವ್ಯಕ್ತಿ ಸ್ವಾತಂತ್ರ್ಯದ ಮೇಲಿನ ದಾಳಿ ಎಂದು ಆಮ್ ಆದ್ಮಿ ಪಕ್ಷದ ಗದಗ ಜಿಲ್ಲಾಧ್ಯಕ್ಷ ಡಾ. ದಾದ್ಯಾಪೀರ ಕಲೆಗಾರ ಆರೋಪಿಸಿದ್ದಾರೆ.

ಚುನಾವಣೆಗೂ ಮುನ್ನ ಯುವಕರಿಗೆ ಪ್ರತಿ ವರ್ಷ ಎರಡು ಕೋಟಿ ಉದ್ಯೋಗ ನೀಡುವುದು ಹಾಗೂ ಕಪ್ಪುಹಣವನ್ನು ದೇಶಕ್ಕೆ ತರುವುದಾಗಿ ಭರವಸೆ ನೀಡಿದ್ದ ಕೇಂದ್ರ ಸರ್ಕಾರ, ಇದೀಗ ಯುವ ಸಮುದಾಯದ ಸಮಸ್ಯೆಗಳನ್ನು ಆಲಿಸುವ ಬದಲು ದಮನಕಾರಿ ಕ್ರಮಗಳನ್ನು ಅನುಸರಿಸುತ್ತಿದೆ ಎಂದು ಟೀಕಿಸಿದರು. ಪ್ರಧಾನಿ ನರೇಂದ್ರ ಮೋದಿಯವರು ಟಿಮನ್ ಕಿ ಬಾತ್ ಮಾತ್ರವಲ್ಲ, ದೇಶದ ಯುವಕರ ಟಿದಿಲ್ ಕಿ ಬಾತ್ ಕೂಡ ಕೇಳಬೇಕು ಎಂದು ಅವರು ಆಗ್ರಹಿಸಿದರು. ನೀಟ್ ಪರೀಕ್ಷೆ ವಿವಾದ ಹಾಗೂ ಪ್ರತಿಭಟನೆ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳಲ್ಲಿ ಮೂಡಿರುವ ಆತಂಕ ನಿವಾರಿಸಲು ಕೇಂದ್ರ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಬೇಕು. ಈ ಘಟನೆಯ ನೈತಿಕ ಹೊಣೆ ಹೊತ್ತು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡಬೇಕು. ಪ್ರತಿಭಟನೆಯಲ್ಲಿ ಗಾಯಗೊಂಡ ವಿದ್ಯಾರ್ಥಿಗಳಿಗೆ ಸಮರ್ಪಕ ಚಿಕಿತ್ಸೆ ಹಾಗೂ ಸೂಕ್ತ ಪರಿಹಾರ ನೀಡಬೇಕು ಎಂದು ಡಾ. ದಾದ್ಯಾಪೀರ ಕಲೆಗಾರ ಒತ್ತಾಯಿಸಿದರು.



> **ದೇಶದ ಯುವಕರ ಧ್ವನಿಯನ್ನು ಆಲಿಸುವ ಬದಲು ಅವರ ಮೇಲೆ ಬಲಪ್ರಯೋಗ ನಡೆಸುವುದು ಪ್ರಜಾಪ್ರಭುತ್ವಕ್ಕೆ ಶೋಭೆ ತರುವುದಿಲ್ಲ. ಪ್ರಧಾನಿ ಮೋದಿಯವರು ಮನ್ ಕಿ ಬಾತ್ ಜೊತೆಗೆ ಯುವಕರ ಟಿದಿಲ್ ಕಿ ಬಾತ್‌ಕೂಡ ಕೇಳಬೇಕು.**
> **- ಡಾ. ದಾದಾಪೀರ ಕಲೆಗಾರ,** ಜಿಲ್ಲಾಧ್ಯಕ್ಷರು, ಆಮ್ ಆದ್ಮಿ ಪಕ್ಷ, ಗದಗ

## ಕೋಟ್ಪಾ ಕಾಯ್ದೆ ಉಲ್ಲಂಘಿಸಿದ ಅಂಗಡಿಗಳ ಮೇಲೆ ದಾಳಿ

**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಶಾಲಾ-ಕಾಲೇಜುಗಳ ಸುತ್ತಮುತ್ತ ತಂಬಾಕು ಉತ್ಪನ್ನಗಳ ಮಾರಾಟ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಯಂತ್ರಣಕ್ಕೆ ಶಿರಹಟ್ಟಿಯಲ್ಲಿ ಗುರುವಾರ ಕೋಟ್ಪಾ (ಇಣಖಿಕಅ-2003) ಕಾಯ್ದೆಯಡಿ ವಿಶೇಷ ದಾಳಿ ನಡೆಸಿ ನಿಯಮ ಉಲ್ಲಂಘಿಸಿದ ಮಾರಾಟಗಾರರಿಗೆ ದಂಡ ವಿಧಿಸಿ ಎಚ್ಚರಿಕೆ ನೀಡಲಾಯಿತು. ತಹಸೀಲ್ದಾರ್ ಕೆ. ರಾಘವೇಂದ್ರರಾವ್ ಅವರ ನೇತೃತ್ವದಲ್ಲಿ ಆರೋಗ್ಯ ಇಲಾಖೆ, ಪೊಲೀಸ್ ಇಲಾಖೆ, ಪಟ್ಟಣ ಪಂಚಾಯಿತಿ ಹಾಗೂ ಕಾರ್ಮಿಕ ಇಲಾಖೆಯ ಅಧಿಕಾರಿಗಳು ಜಂಟಿಯಾಗಿ ಕಾರ್ಯಾಚರಣೆ ನಡೆಸಿ ಶಿಕ್ಷಣ ಸಂಸ್ಥೆಗಳ ಸುತ್ತಮುತ್ತಲಿನ ಅಂಗಡಿಗಳನ್ನು ಪರಿಶೀಲಿಸಿದರು.

ಈ ವೇಳೆ ಮಾತನಾಡಿದ ತಹಸೀಲ್ದಾರ್ ಕೆ. ರಾಘವೇಂದ್ರರಾವ್, ಕೋಟ್ಪಾ ಕಾಯ್ದೆಯ ಸೆಕ್ಷನ್ 6(ಬಿ) ಪ್ರಕಾರ ಶಾಲೆ-ಕಾಲೇಜುಗಳ 100 ಮೀಟರ್ ವ್ಯಾಪ್ತಿಯಲ್ಲಿ ತಂಬಾಕು ಉತ್ಪನ್ನಗಳ ಮಾರಾಟ ಮತ್ತು ಬಳಕೆ ನಿಷೇಧಿಸಲಾಗಿದೆ. ಆದರೂ ಕೆಲವು ಅಂಗಡಿಗಳಲ್ಲಿ ನಿಯಮ ಉಲ್ಲಂಘನೆ ಕಂಡುಬಂದಿದ್ದು, ಅಂತಹ ಅಂಗಡಿಗಳಿಗೆ ದಂಡ ವಿಧಿಸಿ ತಕ್ಷಣವೇ ಮಾರಾಟ ನಿಲ್ಲಿಸುವಂತೆ ಸೂಚಿಸಲಾಗಿದೆ ಎಂದು ಹೇಳಿದರು.

ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಹಾಗೂ ಉಗುಳುವುದೂ ನಿಷೇಧವಾಗಿದೆ. ಹೋಟೆಲ್, ಪಾನ್ಬೀಡಾ ಅಂಗಡಿ, ಬಾರ್ ಹಾಗೂ ರೆಸ್ಟೋರೆಂಟ್‌ಗಳಲ್ಲಿ ತಂಬಾಕು ನಿಷೇಧಿತ ಪ್ರದೇಶ ಹಾಗೂ 21 ವರ್ಷಕ್ಕಿಂತ ಕಡಿಮೆ ವಯಸ್ಸಿನವರಿಗೆ ತಂಬಾಕು ಉತ್ಪನ್ನ ಮಾರಾಟ ನಿಷೇಧದ ಫಲಕಗಳನ್ನು ಕಡ್ಡಾಯವಾಗಿ ಅಳವಡಿಸಬೇಕು. ನಿಯಮ ಉಲ್ಲಂಘನೆ ಮುಂದುವರಿದರೆ ಕಾನೂನು ಪ್ರಕಾರ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ತಂಬಾಕು ಸೇವನೆ ಮತ್ತು ಪರೋಕ್ಷ ಧೂಮಪಾನದಿಂದ ಕ್ಯಾನ್ಸರ್, ಹೃದಯ ಸಂಬಂಧಿ ಕಾಯಿಲೆಗಳು, ಪಾರ್ಶ್ವವಾಯು ಸೇರಿದಂತೆ ಹಲವು ಮಾರಣಾಂತಿಕ ಕಾಯಿಲೆಗಳು ಉಂಟಾಗುವ ಸಾಧ್ಯತೆ ಇರುವುದರಿಂದ ಸಾರ್ವಜನಿಕರು ತಂಬಾಕು ಸೇವನೆಯಿಂದ ದೂರವಿರಬೇಕು ಎಂದು ಜಾಗೃತಿ ಮೂಡಿಸಲಾಯಿತು.

ದಾಳಿಯಲ್ಲಿ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಸಲಹೆಗಾರ ಗೋಪಾಲ ಸುರಪುರ, ಡಾ. ಪವನ ಪಾಯದೆ, ಎಎಸ್‌ಐ ಎಂ.ಎನ್. ಅಯ್ಯನಗೌಡರ, ಎಂ.ಹೆಚ್. ನಾಯ್ಕ, ಬಸಮ್ಮ ಚಿತ್ತರಗಿ, ಗಿರೀಶ್ ವೀರನಗೌಡರ, ರಮೇಶ್, ಎಸ್. ಮಹೇಶ್, ಅಭಿನಂದನ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಪಾಲ್ಗೊಂಡಿದ್ದರು.

## ನಾಳೆ ಗಜೇಂದ್ರಗಡದಲ್ಲಿ ಕೊರವಿ ಡೆವಲಪರ್ಸ್‌ನ 25ನೇ ಮಹತ್ವಾಕಾಂಕ್ಷಿ ಯೋಜನೆಗೆ ಭೂಮಿಪೂಜೆ

**ವಿಜಯಸಾಕ್ಷಿ ಸುದ್ದಿ, ಗದಗ**

ಕಳೆದ 14 ವರ್ಷಗಳಿಂದ ಹುಬ್ಬಳ್ಳಿ-ಧಾರವಾಡ ಭಾಗದಲ್ಲಿ ರಿಯಲ್ ಎಸ್ಟೇಟ್ ಕ್ಷೇತ್ರದಲ್ಲಿ ತನ್ನದೇ ಆದ ಹೆಜ್ಜೆಗುರುತು ಮೂಡಿಸಿರುವ ಕೊರವಿ ಡೆವಲಪರ್ಸ್ ಬಿಲ್ಡರ್ಸ್ ಇದೀಗ ತನ್ನ ಕಾರ್ಯಚಟುವಟಿಕೆಯನ್ನು ಗಜೇಂದ್ರಗಡ, ಬಳ್ಳಾರಿ, ಮುಂಡರಗಿ ಹಾಗೂ ದಾವಣಗೆರೆ ಭಾಗಕ್ಕೂ ವಿಸ್ತರಿಸಿದೆ.

ಸಾಮಾನ್ಯ ಜನರು ಸುಲಭ ಕಂತುಗಳ (ಇಎಂಐ) ಮೂಲಕ ನಿವೇಶನ ಖರೀದಿಸುವ ಅವಕಾಶ ಕಲ್ಪಿಸುವ ಉದ್ದೇಶದಿಂದ ಕಾರ್ಯನಿರ್ವಹಿಸುತ್ತಿರುವ ಸಂಸ್ಥೆ, ಗಜೇಂದ್ರಗಡ ಪಟ್ಟಣದಲ್ಲಿ 33 ಎಕರೆ ವಿಸ್ತೀರ್ಣದಲ್ಲಿ ತನ್ನ 25ನೇ ಲ್ಯಾಂಡ್‌ಮಾರ್ಕ್ ಮೈಲ್ ಸ್ಟೋನ್ ಯೋಜನೆಯನ್ನು ಆರಂಭಿಸುತ್ತಿದ್ದು, ಇದರ ಭೂಮಿಪೂಜೆ ಸಮಾರಂಭ ಜುಲೈ 25ರಂದು ಶನಿವಾರ ಬೆಳಿಗ್ಗೆ 10 ಗಂಟೆಗೆ ಗಜೇಂದ್ರಗಡಇಳಕಲ್ ರಸ್ತೆಯ ಬೆಣಚಮಟ್ಟಿ ಕ್ರಾಸ್ ಬಳಿ ನಡೆಯಲಿದೆ.

ಸಂಸ್ಥೆಯ ಸಂಸ್ಥಾಪಕ ಕುಟುಂಬದ ಹಿರಿಯರಾದ ಮೂರುಸಾವಿರಪ್ಪ ಕೊರವಿ ಅವರು 1984ರಲ್ಲಿ ಪುರಸಭೆಯ ನಗರಾಭಿವೃದ್ಧಿ ಮಂಡಳಿಯ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿದ್ದು, ಪ್ರತಿಯೊಬ್ಬರಿಗೂ ಸ್ವಂತ ನಿವೇಶನ ಇರಬೇಕು ಎಂಬ ಕನಸು ಕಂಡಿದ್ದರು. ಆ ಕನಸನ್ನು ಅವರ ಪುತ್ರರಾದ ರಾಜಣ್ಣ ಎಂ. ಕೊರವಿ, ಡಾ. ವಿಶ್ವನಾಥ ಎಂ. ಕೊರವಿ ಹಾಗೂ ಶಶಿಧರ ಎಂ. ಕೊರವಿ ಮುಂದುವರಿಸಿಕೊಂಡು ಬಂದಿದ್ದಾರೆ ಎಂದು ಸಂಸ್ಥೆ ತಿಳಿಸಿದೆ. ರಾಜಣ್ಣ ಎಂ. ಕೊರವಿ ರಾಜಕೀಯ ಕ್ಷೇತ್ರದಲ್ಲಿ ಸಕ್ರಿಯರಾಗಿದ್ದು, ಡಾ. ವಿಶ್ವನಾಥ ಎಂ. ಕೊರವಿ ಚೇತನ ಬಿಸಿನೆಸ್ ಸ್ಕೂಲ್‌ನ ನಿರ್ದೇಶಕರಾಗಿ ಶಿಕ್ಷಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಶಶಿಧರ ಎಂ. ಕೊರವಿ ನೇತೃತ್ವದಲ್ಲಿ ಕೊರವಿ ಡೆವಲಪರ್ಸ್ ಬಿಲ್ಡರ್ಸ್ ಸಂಸ್ಥೆ ರಿಯಲ್ ಎಸ್ಟೇಟ್ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿದೆ.



ಹುಬ್ಬಳ್ಳಿ-ಧಾರವಾಡ ಭಾಗದ ಹೊರತಾಗಿಯೂ ವಿವಿಧ ಜಿಲ್ಲೆಗಳ ಜನರಿಂದ ಲೇಔಟ್ ಆರಂಭಿಸುವಂತೆ ಬೇಡಿಕೆ ವ್ಯಕ್ತವಾದ ಹಿನ್ನೆಲೆಯಲ್ಲಿ ಸಂಸ್ಥೆ ತನ್ನ ಸೇವೆಯನ್ನು ವಿಸ್ತರಿಸಿದೆ. ಗಜೇಂದ್ರಗಡದ ಹೊಸ ಯೋಜನೆಯಲ್ಲಿ ಶಾಲೆ, ಕಾಲೇಜು, ಕ್ಲಬ್ ಹೌಸ್, ಈಜುಕೊಳ, ಉದ್ಯಾನ, ದೇವಸ್ಥಾನ ಹಾಗೂ ಕ್ರಿಕೆಟ್ ಅಕಾಡೆಮಿ ಸೇರಿದಂತೆ ಮೆಟ್ರೋ ನಗರಗಳ ಮಾದರಿಯ ವಿವಿಧ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿದೆ.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ತೋಂಟದಾರ್ಯ ಮಠದ ಜಗದ್ಗುರು ಡಾ. ಸಿದ್ದರಾಮೇಶ್ವರ ಮಹಾಸ್ವಾಮಿಗಳು, ಮೈಸೂರು ಮಠದ ಜಗದ್ಗುರು ವಿಜಯ ಮಹಾಂತ ಮಹಾಸ್ವಾಮಿಗಳು ಹಾಗೂ ಗುಲಗಂಜಿ ಮಠದ ಜಗದ್ಗುರು ಗುರುಪಾದ ಮಹಾಸ್ವಾಮಿಗಳು ವಹಿಸಲಿದ್ದಾರೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಸಂಸದ ಬಸವರಾಜ ಬೊಮ್ಮಾಯಿ, ಶಾಸಕರಾದ ಎಚ್.ಕೆ. ಪಾಟೀಲ, ಜಿ.ಎಸ್. ಪಾಟೀಲ, ದೊಡ್ಡನಗೌಡ ಪಾಟೀಲ, ಸಿ.ಸಿ. ಪಾಟೀಲ, ಎನ್.ಎಚ್. ಕೋನರಡ್ಡಿ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ್, ಶಾಸಕ ಮಹೇಶ್ ಟೆಂಗಿನಕಾಯಿ, ಮಾಜಿ ಸಭಾಪತಿ ವಿರಣ್ಣ ಮತ್ತಿಗಟ್ಟಿ, ಮಾಜಿ ಶಾಸಕ ಕಳಕಪ್ಪ ಬಂಡಿ, ಮಾಜಿ ಅಧ್ಯಕ್ಷ ಚನ್ನು ಪಾಟೀಲ್ ಸೇರಿದಂತೆ ಹಲವರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಇದೇ ಸಂದರ್ಭದಲ್ಲಿ ಗಂಗಾವತಿ ಪ್ರಾಣೇಶ್ ಮತ್ತು ತಂಡದಿಂದ ನಗೆಹಬ್ಬ, ರಾಜ್ಯ ಪ್ರಶಸ್ತಿ ವಿಜೇತ ಅರುಣೋದಯ ಕಲಾ ತಂಡದಿಂದ ಸಾಂಸ್ಕೃತಿಕ ಕಾರ್ಯಕ್ರಮ, ಕುದುರೆ ಸವಾರಿ, ಒಂಟೆ ಸವಾರಿ, ಮ್ಯೂಸಿಕಲ್ ಚೇರ್ ಸೇರಿದಂತೆ ವಿವಿಧ ಮನರಂಜನಾ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಕಾರ್ಯಕ್ರಮಕ್ಕೆ ಆಗಮಿಸುವ ಎಲ್ಲರಿಗೂ ಭೋಜನದ ವ್ಯವಸ್ಥೆ ಕಲ್ಪಿಸಲಾಗಿದೆ.

ಪ್ಲಾಟ್ ಖರೀದಿಸಲು ಆಸಕ್ತಿ ಹೊಂದಿರುವವರು ಹಾಗೂ ಕೊರವಿ ಡೆವಲಪರ್ಸ್‌ನ ಯೋಜನೆಗಳನ್ನು ತಿಳಿದುಕೊಳ್ಳಲು ಬಯಸುವ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ವ್ಯವಸ್ಥಾಪಕ ನಿರ್ದೇಶಕ ಶಶಿಧರ ಎಂ. ಕೊರವಿ ಮನವಿ ಮಾಡಿದ್ದಾರೆ.

## ಸಂಕ್ಷಿಪ್ತ ಸುದ್ದಿಗಳು

# ಸಾಧನೆಗೆ ಸತತ ಪ್ರಯತ್ನವೇ ಯಶಸ್ಸಿನ ಗುಟ್ಟು



**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಸಾಧನೆಗೆ ಸತತ ಪ್ರಯತ್ನ, ಗುರಿ ಮತ್ತು ಛಲ ಇದ್ದರೆ ಯಾವುದೇ ಅಡೆತಡೆ ಯಶಸ್ಸಿನ ಹಾದಿಯನ್ನು ತಡೆಯಲು ಸಾಧ್ಯವಿಲ್ಲ ಎಂದು ಚಂದ್ರಶೇಖರ ಭಜಂತ್ರಿ ಹೇಳಿದರು.

ಪಟ್ಟಣದ ಸರ್ಕಾರಿ ಪ್ರೌಢಶಾಲೆ (ಆರ್‌ಎಂಎಸ್‌ಎ)ಯಲ್ಲಿ ಐಪಿಎಸ್ ಅಧಿಕಾರಿ ರವಿ ಡಿ. ಚನ್ನಣ್ಣವರ ಅವರ 41ನೇ ಜನ್ಮದಿನದ ಅಂಗವಾಗಿ ಗೆಳೆಯರ ಬಳಗದಿಂದ ವಿದ್ಯಾರ್ಥಿಗಳಿಗೆ ನೋಟ್‌ಬುಕ್ ಹಾಗೂ ಪೆನ್ ವಿತರಿಸಿ ಅವರು ಮಾತನಾಡಿದರು.

ಕಡು ಬಡತನದಲ್ಲಿಯೂ ಸಾಧನೆ ಮಾಡುವ ಗುರಿ ಇಟ್ಟುಕೊಂಡು ಶ್ರಮಿಸಿದ ರವಿ ಚನ್ನಣ್ಣವರ ಇಂದು ಐಪಿಎಸ್ ಅಧಿಕಾರಿಯಾಗಿ ಯುವಜನತೆಗೆ ಮಾದರಿಯಾಗಿದ್ದಾರೆ. ವಿದ್ಯಾರ್ಥಿಗಳು ಉತ್ತಮ ಶಿಕ್ಷಣದೊಂದಿಗೆ ಉನ್ನತ ಗುರಿ ಹೊಂದಿ ಸಮಾಜಕ್ಕೆ ಮಾದರಿ ಪ್ರಜೆಗಳಾಗಿ ಬೆಳೆಯಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಪ್ರಧಾನಗುರು ಎಸ್.ಎಚ್. ಪೂಜಾರ, ಎಸ್‌ಡಿಎಂಸಿ ಅಧ್ಯಕ್ಷ ಎಂ.ಎಚ್. ಮಾನೇಗಾರ, ಗುಳಪ್ಪ ಮಜ್ಜಿಗುಡ್ಡ, ಮಹಾಂತೇಶ ಕೇಂಚನಾಯ್ಕರ, ಮಹಾಂತೇಶ ನಪೂರಿಮಠ, ಜಿ.ಎಂ. ಗಾಡಿ, ಮಂಜುನಾಥ ಗಾಣಿಗೇರ, ಹರ್ಷವರ್ಧನ ಹಳ್ಳಿ, ಅಶೋಕ ಬಸರಿಮರದ, ಗೌಸ್ ದುರ್ಗಿಗುಡಿ, ರಾಘವೇಂದ್ರ, ರವಿ ಹಾಳಕೇರಿ, ಶಿಕ್ಷಕರಾದ ನೂರ ಅಹ್ಮದ ನದಾಫ್, ಗೀತಾ ಪಾಟೀಲ, ಎಸ್.ವಿ. ತಿಮ್ಮಾಪೂರ, ಗೀತಾ ಕುಂದರಗಿ ಉಪಸ್ಥಿತರಿದ್ದರು.

# ಪುಸ್ತಕ ಓದಿದಷ್ಟು ಜ್ಞಾನ ವಿಸ್ತಾರ: ಬಿ.ಡಿ. ಹರ್ತಿ



**ವಿಜಯಸಾಕ್ಷಿ ಸುದ್ದಿ, ಗದಗ**

ಪಠ್ಯಪುಸ್ತಕಗಳ ಜೊತೆಗೆ ಸಾಧಕರ ಜೀವನಚರಿತ್ರೆ, ಹಾಗೂ ಉತ್ತಮ ಪುಸ್ತಕಗಳನ್ನು ಓದುವುದರಿಂದ ಜ್ಞಾನ ವಿಸ್ತಾರವಾಗುತ್ತದೆ. ದೇಶ ಸುತ್ತುವುದರಿಂದಲೂ ಅನುಭವದ ಜ್ಞಾನ ಹೆಚ್ಚುತ್ತದೆ ಎಂದು ಬ್ರೈಟ್ ಹಾರಿಝೋನ್ ಪ್ರೌಢಶಾಲೆಯ ಸಂಸ್ಥಾಪಕ ಬಿ.ಡಿ. ಹರ್ತಿ ಹೇಳಿದರು.

ಕಳಸಾಪೂರ ಗ್ರಾಮದ ಬ್ರೈಟ್ ಹಾರಿಝೋನ್ ಪ್ರೌಢಶಾಲೆಯಲ್ಲಿ 9ನೇ ತರಗತಿ ವಿದ್ಯಾರ್ಥಿಗಳು ನೀಡಿದ ಪುಸ್ತಕಗಳಿಂದ ಆರಂಭಿಸಲಾದ ಶಾಲಾ ಪುಸ್ತಕಾಲಯವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಪ್ರತಿದಿನ ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು. ಪೋಷಕರು ಮಕ್ಕಳ ಶಿಕ್ಷಣಕ್ಕಾಗಿ ಸಾಕಷ್ಟು ಶ್ರಮಪಡುತ್ತಿದ್ದು, ಅವರ ನಿರೀಕ್ಷೆಯನ್ನು ಈಡೇರಿಸುವ ಜವಾಬ್ದಾರಿ ವಿದ್ಯಾರ್ಥಿಗಳ ಮೇಲಿದೆ ಎಂದು ಹೇಳಿದರು.

> **ಪಠ್ಯಪುಸ್ತಕಗಳ ಜೊತೆಗೆ ಉತ್ತಮ ಪುಸ್ತಕಗಳು ಮತ್ತು ಸಾಧಕರ ಜೀವನಚರಿತ್ರೆಗಳನ್ನು ಓದಬೇಕು. ದೇಶ ಸುತ್ತಿದಷ್ಟು ಅನುಭವ, ಪುಸ್ತಕ ಓದಿದಷ್ಟು ಜ್ಞಾನ ಸಿಗುತ್ತದೆ.**
> – **ಬಿ.ಡಿ. ಹರ್ತಿ**, ಸಂಸ್ಥಾಪಕರು, ಬ್ರೈಟ್ ಹಾರಿಝೋನ್ ಪ್ರೌಢಶಾಲೆ

ಈ ಸಂದರ್ಭದಲ್ಲಿ ಪ್ರಾಚಾರ್ಯ ಶಿವರಾಜ ಗದಗ, ಮಂಜುನಾಥ ದೇಸಾಯಿ, ಗಿರಿಧರ ಹೊಸಳ್ಳಿ, ಹನುಮಂತಪ್ಪ ಗದಗ, ಮೈಬೂಬ ಹುನಗುಂದ, ಕೆ.ಬಿ. ಹರ್ತಿ, ವಿಜಯಕುಮಾರ ಗದಗ, ಪರಪ್ಪ ಕೋರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಶೇ.87 ಪ್ರಗತಿ ಸಾಧನೆ | ಆಗಸ್ಟ್ 8ರೊಳಗೆ ಶೇ.100 ಗುರಿ ಸಾಧಿಸಲು ಅಧಿಕಾರಿಗಳ ವಿಶ್ವಾಸ

# ಎಸ್‌ಐಆರ್ ಕಾರ್ಯದಲ್ಲಿ ಲಕ್ಷ್ಮೇಶ್ವರ ತಾಲೂಕು ಜಿಲ್ಲೆಗೆ ಪ್ರಥಮ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಭಾರತೀಯ ಚುನಾವಣಾ ಆಯೋಗದ ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಕಾರ್ಯದಲ್ಲಿ ಲಕ್ಷ್ಮೇಶ್ವರ ತಾಲೂಕು ಶೇ.87ರಷ್ಟು ಪ್ರಗತಿ ಸಾಧಿಸುವ ಮೂಲಕ ಗದಗ ಜಿಲ್ಲೆಯಲ್ಲಿ ಮೊದಲ ಸ್ಥಾನ ಪಡೆದುಕೊಂಡಿದೆ.

ತಾಲೂಕಿನ 242 ಮತಗಟ್ಟೆಗಳ ವ್ಯಾಪ್ತಿಯಲ್ಲಿ 96,016 ಮತದಾರರಿದ್ದು, ಎಲ್ಲರಿಗೂ ಎನ್ಯುಮರೇಷನ್ ಫಾರ್ಮ್ ವಿತರಿಸುವ ಕಾರ್ಯ ಪೂರ್ಣಗೊಂಡಿದೆ. ಇದುವರೆಗೆ 74,067 ಮತದಾರರ ಮಾಹಿತಿಯ ಡಿಜಿಟಲೀಕರಣ ಪೂರ್ಣಗೊಂಡಿದ್ದು, ಕೇವಲ 12,870 ಮತದಾರರ ಡಿಜಿಟಲೀಕರಣ ಮಾತ್ರ ಬಾಕಿ ಉಳಿದಿದೆ. ನಿಯಮಾನುಸಾರ 9,079 ಮತದಾರರನ್ನು ಪಟ್ಟಿಯಿಂದ ಕೈಬಿಡಲಾಗಿದೆ.

ಮಾಡಳ್ಳಿ, ಯಳವತ್ತಿ, ಯತ್ತಿನಹಳ್ಳಿ, ಕುಂದ್ರಳ್ಳಿ ತಾಂಡಾ, ಸಂಕದಾಳ, ಶೆಟ್ಟಿಕೇರಿ, ಅಕ್ಕಿಗುಂದ ತಾಂಡಾ, ನಾದಿಗಟ್ಟಿ, ಸೋಗಿವಾಳ, ಅದ್ರಳ್ಳಿ, ಬಡ್ನಿ, ಹಿರೇಮಲ್ಲಾಪುರ, ಕೊಂಡಿಕೊಪ್ಪ, ಗುಲಗಂಜಿಕೊಪ್ಪ, ಗೋವನಾಳ, ಸುವರ್ಣಗಿರಿ, ಉಳ್ಳಟ್ಟಿ, ಶ್ಯಾಬಳಾ, ಶಿಗ್ಲಿ, ಯಲ್ಲಾಪುರ, ದೊಡ್ಡೂರ ಹಾಗೂ ಲಕ್ಷ್ಮೇಶ್ವರ ಪಟ್ಟಣದ ಪಂಪ ಲೈಬ್ರರಿ, ಸರ್ಕಾರಿ ಉರ್ದು ಶಾಲೆ ಮತ್ತು ಎಪಿಎಂಸಿ ಸೇರಿದಂತೆ 35 ಮತಗಟ್ಟೆಗಳಲ್ಲಿ ಶೇ.100 ಡಿಜಿಟಲೀಕರಣ ಪೂರ್ಣಗೊಂಡಿದೆ.

ಗ್ರಾಮೀಣ ಪ್ರದೇಶಗಳಲ್ಲಿ ಉತ್ತಮ ಪ್ರಗತಿ ಕಂಡುಬಂದಿದ್ದರೂ, ಲಕ್ಷ್ಮೇಶ್ವರ ಪಟ್ಟಣ ವ್ಯಾಪ್ತಿಯಲ್ಲಿ ಮಾತ್ರ ಶೇ.60ರಷ್ಟು ಡಿಜಿಟಲೀಕರಣವಾಗಿದ್ದು, ಉಳಿದ ಕಾರ್ಯವನ್ನು ಶೀಘ್ರ ಪೂರ್ಣಗೊಳಿಸಲು ಅಧಿಕಾರಿಗಳು ಕ್ರಮ ಕೈಗೊಂಡಿದ್ದಾರೆ.

ಈ ಸಾಧನೆಯ ಹಿಂದೆ ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ಮತದಾರರ ನೋಂದಣಾಧಿಕಾರಿ ಡಾ. ನಂದಾ ಹಣಬರಟ್ಟಿ ಹಾಗೂ ತಹಸೀಲ್ದಾರ್ ಎಂ. ಧನಂಜಯ ಅವರ ನಿರಂತರ ಮೇಲ್ವಿಚಾರಣೆ, ಕ್ಷೇತ್ರ ಭೇಟಿ ಮತ್ತು ಬಿಎಲ್‌ಒಗಳ ಪರಿಶ್ರಮ ಪ್ರಮುಖ ಕಾರಣವಾಗಿದೆ. ಅಧಿಕಾರಿಗಳು ಸ್ವತಃ ಮನೆ-ಮನೆಗೆ ತೆರಳಿ ಮತದಾರರ ಮಾಹಿತಿ ಪರಿಶೀಲಿಸಿ ಡಿಜಿಟಲೀಕರಣ ಕಾರ್ಯವನ್ನು ವೇಗಗೊಳಿಸಿದ್ದಾರೆ.

> **ಮತದಾರರ ಪಟ್ಟಿ ಪರಿಷ್ಕರಣೆ ಪ್ರಜಾಪ್ರಭುತ್ವದ ಅಡಿಪಾಯವನ್ನು ಬಲಪಡಿಸುವ ಮಹತ್ವದ ಪ್ರಕ್ರಿಯೆ. ಆಗಸ್ಟ್ 8ರೊಳಗೆ ಅರ್ಹ ಮತದಾರರು ಯಾರೂ ಹೊರಗುಳಿಯದಂತೆ ಹಾಗೂ ಅನರ್ಹರ ಹೆಸರು ಉಳಿಯದಂತೆ ಕಾರ್ಯ ಪೂರ್ಣಗೊಳಿಸಲು ಸಾರ್ವಜನಿಕರು ಮತ್ತು ಜನಪ್ರತಿನಿಧಿಗಳ ಸಹಕಾರ ಅಗತ್ಯವಾಗಿದೆ.**
> – **ಡಾ. ನಂದಾ ಹಣಬರಟ್ಟಿ**, ಮತದಾರರ ನೋಂದಣಾಧಿಕಾರಿ, ಶಿರಹಟ್ಟಿ ವಿಧಾನಸಭಾ ಕ್ಷೇತ್ರ

ಎಸ್‌ಐಆರ್ ಪ್ರಕ್ರಿಯೆಯಡಿ ಮತದಾರರ ಪಟ್ಟಿಯಲ್ಲಿನ ಲೋಪದೋಷ ಸರಿಪಡಿಸುವುದು, ಮರಣ ಹೊಂದಿದವರ ಹೆಸರುಗಳನ್ನು ಕೈಬಿಡುವುದು, ಶಾಶ್ವತವಾಗಿ ಸ್ಥಳಾಂತರಗೊಂಡವರ ಮಾಹಿತಿ ಪರಿಷ್ಕರಿಸುವುದು, ಮದುವೆಯ ನಂತರ ಹೆಸರು ಬದಲಾದ ಮಹಿಳೆಯರ ವಿವರ ನವೀಕರಿಸುವುದು ಹಾಗೂ 18 ವರ್ಷ ಪೂರ್ಣಗೊಳಿಸಿದ ಹೊಸ ಮತದಾರರನ್ನು ಸೇರ್ಪಡೆಗೊಳಿಸುವ ಕಾರ್ಯಕ್ಕೂ ಆದ್ಯತೆ ನೀಡಲಾಗಿದೆ.

### ಎಸ್‌ಎನ್‌ಎಫ್ ಸೂತ್ರ ಪರಿಷ್ಕರಣೆ ಮಾಡಿದರೆ ಹಾಲು ಸಂಘಗಳ ಅಭಿವೃದ್ಧಿ ಸಾಧ್ಯ: ಎಚ್.ಜಿ. ಹಿರೇಗೌಡ್ರ

# ಗುಣಮಟ್ಟದ ಹಾಲಿಗೆ ಹೊಸ ಸೂತ್ರ ಬೇಕು!



**ವಿಜಯಸಾಕ್ಷಿ ಸುದ್ದಿ, ಗದಗ**

ಪ್ರಸ್ತುತ ಜಾರಿಯಲ್ಲಿರುವ ಎಸ್‌ಎನ್‌ಎಫ್ (SNF) ಸೂತ್ರದಲ್ಲಿ ಅಗತ್ಯ ಬದಲಾವಣೆ ಮಾಡಿದರೆ ರಾಜ್ಯದ ಹಾಲು ಉತ್ಪಾದಕರ ಸಹಕಾರ ಸಂಘಗಳ ಅಭಿವೃದ್ಧಿಗೆ ಹೆಚ್ಚಿನ ಉತ್ತೇಜನ ದೊರೆಯಲಿದೆ ಎಂದು ಕರ್ನಾಟಕ ರಾಜ್ಯ ಸಹಕಾರಿ ಹಾಲು ಉತ್ಪಾದಕರ ಮಹಾಮಂಡಳದ ನಿರ್ದೇಶಕ ಎಚ್.ಜಿ. ಹಿರೇಗೌಡ್ರ ಹೇಳಿದರು.

ಸಹಕಾರ ಇಲಾಖೆ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಗದಗ ಜಿಲ್ಲಾ ಸಹಕಾರ ಯೂನಿಯನ್, ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ ಹಾಗೂ ಧಾರವಾಡ, ಗದಗ ಮತ್ತು ಉತ್ತರ ಕನ್ನಡ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟದ ಸಂಯುಕ್ತ ಆಶ್ರಯದಲ್ಲಿ ಗದಗ ತಾಲೂಕಿನ ಹಾಲು ಉತ್ಪಾದಕರ ಸಹಕಾರ ಸಂಘಗಳ ಅಧ್ಯಕ್ಷರು ಹಾಗೂ ಮುಖ್ಯ ಕಾರ್ಯನಿರ್ವಾಹಕರಿಗಾಗಿ ಗದಗದ ಪಶುವೈದ್ಯಕೀಯ ಪಾಲಿಕ್ಲಿನಿಕ್ ಸಭಾಂಗಣದಲ್ಲಿ ಆಯೋಜಿಸಿದ್ದ ವಿಶೇಷ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಸ್ತುತ ಎಸ್‌ಎನ್‌ಎಫ್ 8.5 ಹಾಗೂ ಫ್ಯಾಟ್ 3.5 ಹೊಂದಿರುವ ಹಾಲನ್ನು ಶುದ್ಧ ಹಾಲು ಎಂದು ಪರಿಗಣಿಸಲಾಗುತ್ತಿದೆ. ಆದರೆ ಈ ಮಾನದಂಡವನ್ನು ಎಲ್ಲೆಡೆ ಪಾಲಿಸಲು ಸಾಧ್ಯವಾಗುತ್ತಿಲ್ಲ. ಆದ್ದರಿಂದ ಎಸ್‌ಎನ್‌ಎಫ್ ಸೂತ್ರ ಪರಿಷ್ಕರಣೆ ಅಗತ್ಯವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ಭಾರತವು ವಿಶ್ವದಲ್ಲೇ ಅತಿಹೆಚ್ಚು ಹಾಲು ಉತ್ಪಾದಿಸುವ ದೇಶವಾಗಿದ್ದು, ಕರ್ನಾಟಕದಲ್ಲೂ ಹೈನುಗಾರಿಕೆ ಗ್ರಾಮೀಣ ಆರ್ಥಿಕತೆಯ ಬೆನ್ನೆಲುಬಾಗಿದೆ.

> **ಎಸ್‌ಎನ್‌ಎಫ್ ಸೂತ್ರದಲ್ಲಿ ಅಗತ್ಯ ಬದಲಾವಣೆ ಮಾಡಿದರೆ ಹಾಲು ಉತ್ಪಾದಕರ ಸಹಕಾರ ಸಂಘಗಳ ಅಭಿವೃದ್ಧಿಗೆ ಮತ್ತಷ್ಟು ಉತ್ತೇಜನ ಸಿಗಲಿದೆ. ಗುಣಮಟ್ಟದ ಹಾಲು ಉತ್ಪಾದನೆಗೆ ಎಲ್ಲ ಸಂಘಗಳು ಒತ್ತು ನೀಡಬೇಕು.**
> – **ಎಚ್.ಜಿ. ಹಿರೇಗೌಡ್ರ**, ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರಿ ಹಾಲು ಉತ್ಪಾದಕರ ಮಹಾಮಂಡಳ

ಹಾಲಿನ ಗುಣಮಟ್ಟ ಹೆಚ್ಚಿಸುವುದರ ಜೊತೆಗೆ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆಯ ಮಾನದಂಡಗಳನ್ನು ಕಟ್ಟುನಿಟ್ಟಾಗಿ ಪಾಲಿಸುವ ಮೂಲಕ ಗ್ರಾಹಕರಿಗೆ ಸುರಕ್ಷಿತ ಹಾಲು ತಲುಪಿಸಬೇಕು ಎಂದು ಹೇಳಿದರು. ಹಾಲಿನ ಹಣವನ್ನು ನೇರವಾಗಿ ರೈತರ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗುತ್ತಿದೆ ಎಂದರು.

ಪಶುಪಾಲನಾ ಹಾಗೂ ಪಶುವೈದ್ಯ ಸೇವಾ ಇಲಾಖೆಯ ಉಪನಿರ್ದೇಶಕ (ಆಡಳಿತ) ಎಚ್.ಬಿ. ಹುಲಗಣ್ಣವರ ಮಾತನಾಡಿ, ಆಧುನಿಕ ಡೇರಿ ತಂತ್ರಜ್ಞಾನ ಅಳವಡಿಕೆಯಿಂದ ಗುಣಮಟ್ಟದ ಹಾಲು ಉತ್ಪಾದನೆ ಹಾಗೂ ರೈತರ ಆದಾಯ ಹೆಚ್ಚಳ ಸಾಧ್ಯವಾಗಿದೆ. ಇಲಾಖೆಯಿಂದ ಅಗತ್ಯ ಸಹಕಾರ ನೀಡಲಾಗುವುದು ಎಂದು ಹೇಳಿದರು.

ಗದಗ ತಾಲೂಕು ಮುಖ್ಯ ಪಶುವೈದ್ಯಾಧಿಕಾರಿ ಎಚ್.ವೈ. ಹೊನ್ನಿನಾಯ್ಕರ ಮಾತನಾಡಿ, ಹಾಲಿನ ಗುಣಮಟ್ಟ ಕಾಪಾಡಲು ಸಂಘಗಳ ಕಾರ್ಯನಿರ್ವಾಹಕರು ನಿರಂತರ ತರಬೇತಿ ಪಡೆಯುವುದು ಅಗತ್ಯ. ತಳಿ ಅಭಿವೃದ್ಧಿ, ಹಸಿರು ಮೇವು, ಸಮತೋಲಿತ ಪಶು ಆಹಾರ, ಪಶುವೈದ್ಯ ಸೇವೆ ಹಾಗೂ ಹಾಲು ಸಂಸ್ಕರಣೆಯಲ್ಲಿ ಆಧುನಿಕ ತಂತ್ರಜ್ಞಾನ ಮತ್ತು ಕೃತಕ ಬುದ್ಧಿಮತ್ತೆಯ ಬಳಕೆಯಿಂದ ಹೈನುಗಾರಿಕೆ ಕ್ಷೇತ್ರ ಮತ್ತಷ್ಟು ಬಲಿಷ್ಠವಾಗುತ್ತಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಗದಗ ಜಿಲ್ಲಾ ಸಹಕಾರ ಯೂನಿಯನ್ ನಿರ್ದೇಶಕ ಎಸ್.ಕೆ. ಕುರಡಗಿ ಮಾತನಾಡಿ, ಗ್ರಾಮೀಣ ಪ್ರದೇಶದ ಮಹಿಳೆಯರು ಹಾಲು ಉತ್ಪಾದಕರ ಸಹಕಾರ ಸಂಘಗಳ ಮೂಲಕ ಆರ್ಥಿಕವಾಗಿ ಸ್ವಾವಲಂಬಿಗಳಾಗಬೇಕು. ಸಂಘಗಳ ಪದಾಧಿಕಾರಿಗಳು ತರಬೇತಿಯ ಸದುಪಯೋಗ ಪಡೆದು ಸಂಘಗಳ ಬೆಳವಣಿಗೆಗೆ ಶ್ರಮಿಸಬೇಕು ಎಂದು ಕರೆ ನೀಡಿದರು.

ತರಬೇತಿ ಕಾರ್ಯಾಗಾರದಲ್ಲಿ ಧಾರವಾಡ ಹಾಲು ಒಕ್ಕೂಟದ ಸೌಲಭ್ಯಗಳು, ಜಾನುವಾರುಗಳ ರೋಗ ನಿಯಂತ್ರಣ, ಶುದ್ಧ ಹಾಗೂ ಅಧಿಕ ಹಾಲು ಉತ್ಪಾದನೆ, ಪಶು ಆಹಾರ ಮತ್ತು ಮೇವು ಬೆಳೆಗಳ ಕುರಿತು ತಜ್ಞರು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಸಹಕಾರ ಅಭಿವೃದ್ಧಿ ಅಧಿಕಾರಿ ಬಿ.ಆರ್. ನಿಡಗುಂದಿ, ಡಾ. ಆರ್.ವೈ. ಗುರಿಕಾರ, ಧಾರವಾಡ ಹಾಲು ಒಕ್ಕೂಟದ ಜಿಲ್ಲಾ ಮುಖ್ಯಸ್ಥ ಪ್ರಸನ್ನ ಪಟ್ಟೇದ, ಕಿರಣಕುಮಾರ ಎ. ಹುಗ್ಗಿ ಸೇರಿದಂತೆ ಹಲವು ಅಧಿಕಾರಿಗಳು ಹಾಗೂ ಹಾಲು ಉತ್ಪಾದಕರ ಸಹಕಾರ ಸಂಘಗಳ ಅಧ್ಯಕ್ಷರು ಮತ್ತು ಮುಖ್ಯ ಕಾರ್ಯನಿರ್ವಾಹಕರು ಭಾಗವಹಿಸಿದ್ದರು.

# ಸರ್ಕಾರಿ ಶಾಲಾ ಮಕ್ಕಳಿಗೆ ಶಿಕ್ಷಣ ಕಿಟ್ ವಿತರಣೆ



**ವಿಜಯಸಾಕ್ಷಿ ಸುದ್ದಿ, ಗದಗ**

ದ್ವಾರಕಾಮಾಯಿ ಫೌಂಡೇಶನ್ ಹಾಗೂ ಅಮೃತಾ ಟೂಲ್ಸ್ ಆ್ಯಂಡ್ ಕ್ರಾಫ್ಟ್ ಪ್ರೈವೇಟ್ ಲಿಮಿಟೆಡ್, ಹೈದರಾಬಾದ್ ಸಹಯೋಗದಲ್ಲಿ ಗಾವರವಾಡ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ 151 ವಿದ್ಯಾರ್ಥಿಗಳಿಗೆ ಶಾಲಾ ಬ್ಯಾಗ್, ನೋಟ್ ಬುಕ್, ಪೆನ್ ಹಾಗೂ ಪೆನ್ಸಿಲ್ ಕಿಟ್‌ಗಳನ್ನು ವಿತರಿಸಲಾಯಿತು.

ಶಾಲೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಎಸ್‌ಡಿಎಂಸಿ ಅಧ್ಯಕ್ಷ ಬಸವರಾಜ ಬಸರಕೋಡ, ಗ್ರಾಮ ಪಂಚಾಯಿತಿ ಸದಸ್ಯರು, ಶಾಲೆಯ ಪ್ರಧಾನಗುರು ಎಂ.ಬಿ. ದೊಡ್ಡಮನಿ ಹಾಗೂ ದ್ವಾರಕಾಮಾಯಿ ಫೌಂಡೇಶನ್‌ನ ಸ್ವಯಂಸೇವಕರಾದ ಖಾಜಾವಾಲಿ ಮುಲ್ಲಾ ವಿದ್ಯಾರ್ಥಿಗಳಿಗೆ ಶಿಕ್ಷಣ ಕಿಟ್‌ಗಳನ್ನು ವಿತರಿಸಿದರು.

ಮಕ್ಕಳು ಶಿಕ್ಷಣದಲ್ಲಿ ಹೆಚ್ಚಿನ ಆಸಕ್ತಿ ತೋರಿಸಿ ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು. ಇಂತಹ ಸಾಮಾಜಿಕ ಸೇವಾ ಕಾರ್ಯಕ್ರಮಗಳು ಸರ್ಕಾರಿ ಶಾಲಾ ಮಕ್ಕಳಿಗೆ ಉತ್ತೇಜನ ನೀಡುತ್ತವೆ ಎಂದು ಗಣ್ಯರು ಅಭಿಪ್ರಾಯಪಟ್ಟರು. ಕಾರ್ಯಕ್ರಮದಲ್ಲಿ ಸಹ ಶಿಕ್ಷಕರು, ದ್ವಾರಕಾಮಾಯಿ ಫೌಂಡೇಶನ್‌ನ ಸ್ವಯಂಸೇವಕರಾದ ಗಣೇಶ ಚವಡಿ, ಬಸವರಾಜ ಕಟಗಿ, ಎಸ್‌ಡಿಎಂಸಿ ಸದಸ್ಯರು, ಗ್ರಾಮ ಪಂಚಾಯಿತಿ ಸದಸ್ಯರು ಹಾಗೂ ಶಾಲೆಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಒಳಮೀಸಲಾತಿ ವರ್ಗೀಕರಣ ಮರುಪರಿಶೀಲನೆಗೆ ಆಗ್ರಹ



**ವಿಜಯಸಾಕ್ಷಿ ಸುದ್ದಿ, ಗದಗ**

ಒಳಮೀಸಲಾತಿಯ ಅವೈಜ್ಞಾನಿಕ ವರ್ಗೀಕರಣದಿಂದ ಬಂಜಾರಾ, ಭೋವಿ, ಕೊರಚ ಹಾಗೂ ಕೊರಮ ಸಮುದಾಯಗಳಿಗೆ ಶೈಕ್ಷಣಿಕ ಮತ್ತು ಉದ್ಯೋಗ ಕ್ಷೇತ್ರದಲ್ಲಿ ಅನ್ಯಾಯವಾಗುತ್ತಿದೆ ಎಂದು ಆರೋಪಿಸಿ, ಸಮುದಾಯದ ಮುಖಂಡರು ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿ ಅವರಿಗೆ ಬುಧವಾರ ಮನವಿ ಸಲ್ಲಿಸಿದರು. ಮನವಿ ಸಲ್ಲಿಸಿದ ಬಳಿಕ ಮಾತನಾಡಿದ ರವಿಕಾಂತ ಅಂಗಡಿ, ಪರಿಶಿಷ್ಟ ಜಾತಿಗಳ ಒಳಮೀಸಲಾತಿ ವರ್ಗೀಕರಣ, ಮೀಸಲಾತಿ ಪ್ರಮಾಣ ಹಾಗೂ ರೋಸ್ಟರ್ ಬಿಂದುಗಳ ನಿಗದಿಯಲ್ಲಿ ಈ ಸಮುದಾಯಗಳಿಗೆ ಅನ್ಯಾಯವಾಗಿದೆ ಎಂದು ಆರೋಪಿಸಿದರು.

ಎಬಿಸಿ ವರ್ಗೀಕರಣವನ್ನು ಮರುಪರಿಶೀಲಿಸಬೇಕು. ಪರಿಶಿಷ್ಟ ಜಾತಿಗಳಿಗೆ ಇರುವ ಶೇ.15ರ ಮೀಸಲಾತಿಯಲ್ಲಿ ಸಿ ಗುಂಪಿಗೆ ಶೇ.5ರಷ್ಟು ಮೀಸಲಾತಿ ನೀಡಬೇಕು. ರೋಸ್ಟರ್ ಬಿಂದುಗಳಲ್ಲಿ ಆಗಿರುವ ಅನ್ಯಾಯವನ್ನು ಸರಿಪಡಿಸಿ, ಸಮಾನ ಅವಕಾಶ ಕಲ್ಪಿಸಬೇಕು.

ಇದುವರೆಗೆ ಪ್ರಕಟಿಸಿರುವ ನೇಮಕಾತಿ ಅಧಿಸೂಚನೆಗಳನ್ನು ಹಿಂಪಡೆದು, ಪರಿಷ್ಕೃತ ನಿಯಮಗಳ ಪ್ರಕಾರ ಹೊಸ ಅಧಿಸೂಚನೆಗಳನ್ನು ಹೊರಡಿಸಬೇಕು ಎಂದು ಅವರು ಒತ್ತಾಯಿಸಿದರು.

ಬಂಜಾರಾ, ಭೋವಿ, ಕೊರಚ ಹಾಗೂ ಕೊರಮ ಸಮುದಾಯಗಳಿಗೆ ಆಗಿರುವ ಅನ್ಯಾಯವನ್ನು ಸರ್ಕಾರ ತಕ್ಷಣ ಸರಿಪಡಿಸಿ, ಸಾಮಾಜಿಕ ನ್ಯಾಯ ಮತ್ತು ಸಮಾನ ಅವಕಾಶದ ತತ್ವದಡಿ ಎಲ್ಲ ಪರಿಶಿಷ್ಟ ಜಾತಿ ಸಮುದಾಯಗಳಿಗೆ ನ್ಯಾಯಯುತ ಪ್ರಾತಿನಿಧ್ಯ ಕಲ್ಪಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಮನವಿ ಸಲ್ಲಿಸುವ ಸಂದರ್ಭದಲ್ಲಿ ಕೆ.ಸಿ. ನಭಾಪುರ, ಪರಮೇಶ ನಾಯಕ, ಟಿ.ಡಿ. ಪೂಜಾರ, ಎಲ್.ಎಲ್. ಚವ್ಹಾಣ, ಚಂದು ನಾಯಕ, ವಿಠ್ಠಲ ತೋಟದ, ತುಳಚಪ್ಪ ಚವ್ಹಾಣ, ಪರಶುರಾಮ ಚವ್ಹಾಣ, ಪ್ರಕಾಶ ಪೂಜಾರ, ಸುರೇಶ ವಿ. ಲಮಾಣಿ, ತುಕಾರಾಮ ಲಮಾಣಿ, ಸಂತೋಷ ಪವಾರ, ಪ್ರಕಾಶ ಈ. ಲಮಾಣಿ, ರಮೇಶ ಲಮಾಣಿ, ಬಾಪೂಜಿ ಲಮಾಣಿ, ಗಣೇಶ ಲಮಾಣಿ, ಚನ್ನಪ್ಪ ಲಮಾಣಿ, ಆಕಾಶ ಲಮಾಣಿ, ದೇವೇಂದ್ರ ಪಿ. ಲಮಾಣಿ, ಪರಸು ಲಮಾಣಿ, ಮುತ್ತಪ್ಪ ಲಮಾಣಿ, ರಾಜು ಲಮಾಣಿ, ಗೋಪಿ ಜಾದವ್, ಸುನಿಲ್ ಪವಾರ ಸೇರಿದಂತೆ ಸಮುದಾಯದ ಮುಖಂಡರು, ಹಿರಿಯರು ಹಾಗೂ ಯುವಕರು ಉಪಸ್ಥಿತರಿದ್ದರು.

### ಆರು ತಿಂಗಳಲ್ಲಿ 1,795 ಅತಿಸಾರ, 25 ಡೆಂಗ್ಯೂ ಪ್ರಕರಣ; ಮುನ್ನೆಚ್ಚರಿಕೆ ವಹಿಸಲು ಆರೋಗ್ಯ ಇಲಾಖೆಯ ಸಲಹೆ

# ಮಳೆಗಾಲದಲ್ಲಿ ಸಾಂಕ್ರಾಮಿಕ ರೋಗಗಳ ಎಚ್ಚರ

**ವಿಜಯಸಾಕ್ಷಿ ಸುದ್ದಿ, ಗದಗ**

ಮಳೆಗಾಲದ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆ ಹೆಚ್ಚಿರುವುದರಿಂದ ಸಾರ್ವಜನಿಕರು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮನವಿ ಮಾಡಿದೆ.

ಜನವರಿಯಿಂದ ಜೂನ್ 2026ರವರೆಗೆ ಜಿಲ್ಲೆಯಲ್ಲಿ 1,795 ಅತಿಸಾರ-ಭೇದಿ, 25 ಡೆಂಗ್ಯೂ, 8 ಚಿಕೂನ್‌ಗುನ್ಯಾ, 3 ಜ್ವರಸಹಿತ ಶ್ವಾಸಕೋಶ ಸೋಂಕು, 2 ಮಲೇರಿಯಾ ಹಾಗೂ 2 ಲೆಪ್ಟೋಸ್ಪೈರೋಸಿಸ್ ಪ್ರಕರಣಗಳು ವರದಿಯಾಗಿವೆ. ಇದೇ ಅವಧಿಯಲ್ಲಿ 5,058 ನಾಯಿ ಕಡಿತ ಹಾಗೂ 169 ಹಾವು ಕಡಿತ ಪ್ರಕರಣಗಳು ದಾಖಲಾಗಿರುವುದಾಗಿ ಇಲಾಖೆ ತಿಳಿಸಿದೆ.

ನೀರಿನಿಂದ ಹರಡುವ ಅತಿಸಾರ, ಟೈಫಾಯ್ಡ್ ಹಾಗೂ ಕಾಲರಾ ರೋಗಗಳನ್ನು ತಡೆಗಟ್ಟಲು ಕುದಿಸಿ ಆರಿಸಿದ ಅಥವಾ ಶುದ್ಧೀಕರಿಸಿದ ನೀರನ್ನು ಮಾತ್ರ ಕುಡಿಯಬೇಕು. ಆಹಾರ ಸೇವನೆಗೂ ಮುನ್ನ ಹಾಗೂ ಶೌಚಾಲಯ ಬಳಕೆಯ ನಂತರ ಸಾಬೂನಿನಿಂದ ಕೈ ತೊಳೆಯಬೇಕು. ತೆರೆದಿಟ್ಟ ಅಥವಾ ಅಸ್ವಚ್ಛ ಆಹಾರ ಸೇವಿಸಬಾರದು ಎಂದು ಸಲಹೆ ನೀಡಲಾಗಿದೆ.




ಡೆಂಗ್ಯೂ, ಮಲೇರಿಯಾ ಹಾಗೂ ಚಿಕೂನ್ ಗುನ್ಯಾ ತಡೆಗಟ್ಟಲು ಮನೆ ಸುತ್ತಮುತ್ತ ನೀರು ನಿಲ್ಲದಂತೆ ನೋಡಿಕೊಳ್ಳಬೇಕು. ನೀರಿನ ತೊಟ್ಟಿಗಳು ಹಾಗೂ ಡ್ರಮ್ಮುಗಳನ್ನು ಮುಚ್ಚಿಡಬೇಕು. ಸೊಳ್ಳೆ ಪರದೆ, ಸೊಳ್ಳೆ ನಿವಾರಕ ಬಳಸುವುದರೊಂದಿಗೆ ಪೂರ್ಣ ತೋಳಿನ ಬಟ್ಟೆ ಧರಿಸಬೇಕು. ಜ್ವರ ಕಾಣಿಸಿಕೊಂಡರೆ ಕೂಡಲೇ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡುವಂತೆ ಸೂಚಿಸಲಾಗಿದೆ.

ನಾಯಿ ಅಥವಾ ಇತರೆ ಪ್ರಾಣಿಗಳ ಕಡಿತಕ್ಕೊಳಗಾದರೆ ಗಾಯವನ್ನು ಸಾಬೂನು ಮತ್ತು ಹರಿಯುವ ನೀರಿನಿಂದ ಕನಿಷ್ಠ 15 ನಿಮಿಷ ತೊಳೆದು ತಕ್ಷಣ ಸರ್ಕಾರಿ ಆಸ್ಪತ್ರೆಗೆ ತೆರಳಿ ಆಂಟಿ-ರೇಬಿಸ್ ಲಸಿಕೆ ಪಡೆಯಬೇಕು. ಹಾವು ಕಡಿತವಾದರೆ ಯಾವುದೇ ಸಾಂಪ್ರದಾಯಿಕ ಚಿಕಿತ್ಸೆ ಅನುಸರಿಸದೆ ತಕ್ಷಣ ಆಸ್ಪತ್ರೆಗೆ ಸಾಗಿಸಬೇಕು ಎಂದು ಇಲಾಖೆ ತಿಳಿಸಿದೆ.

ಪ್ರವಾಹ ಅಥವಾ ನಿಂತ ನೀರಿನಲ್ಲಿ ಬರಿಗಾಲಿನಲ್ಲಿ ಓಡಾಡುವುದನ್ನು ತಪ್ಪಿಸಬೇಕು. ಕೃಷಿ ಕೆಲಸದ ವೇಳೆ ಬೂಟು ಹಾಗೂ ಪೂರ್ಣ ತೋಳಿನ ಬಟ್ಟೆ ಧರಿಸಬೇಕು.

> **ಮಳೆಗಾಲದಲ್ಲಿ ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆ ಹೆಚ್ಚಿರುವುದರಿಂದ ಸಾರ್ವಜನಿಕರು ಆತಂಕಪಡದೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಪಾಲಿಸಬೇಕು. ಯಾವುದೇ ರೋಗ ಲಕ್ಷಣ ಕಂಡುಬಂದರೆ ತಕ್ಷಣ ಸರ್ಕಾರಿ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಚಿಕಿತ್ಸೆ ಪಡೆಯಬೇಕು.**
> **– ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ**

ಯಾವುದೇ ರೋಗ ಲಕ್ಷಣ ಕಂಡುಬಂದರೆ ಸ್ವಯಂ ಚಿಕಿತ್ಸೆ ಮಾಡಿಕೊಳ್ಳದೆ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಚಿಕಿತ್ಸೆ ಪಡೆಯುವಂತೆ ಮನವಿ ಮಾಡಲಾಗಿದೆ. ಜಿಲ್ಲೆಯ ಎಲ್ಲ ತಾಲೂಕುಗಳಲ್ಲಿ ಸಾಂಕ್ರಾಮಿಕ ರೋಗಗಳ ಕಣ್ಗಾವಲು ತೀವ್ರಗೊಳಿಸಲಾಗಿದ್ದು, ಶಂಕಿತ ಪ್ರಕರಣಗಳ ಪತ್ತೆ ಹಾಗೂ ಚಿಕಿತ್ಸೆಗೆ ಅಗತ್ಯ ವ್ಯವಸ್ಥೆ ಮಾಡಲಾಗಿದೆ. ಸಾರ್ವಜನಿಕರು ಆತಂಕಪಡುವ ಅಗತ್ಯವಿಲ್ಲ; ಮುನ್ನೆಚ್ಚರಿಕೆ ಕ್ರಮಗಳನ್ನು ಪಾಲಿಸುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಹಾಗೂ ಜಿಲ್ಲಾ ಸಮೀಕ್ಷಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ಮುಳಗುಂದದಲ್ಲಿ ಪತ್ರಿಕಾ ದಿನಾಚರಣೆ

**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಮುಳಗುಂದ ಪಟ್ಟಣದ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಜುಲೈ 24ರಂದು (ಶುಕ್ರವಾರ) ಬೆಳಿಗ್ಗೆ 10.30ಕ್ಕೆ ಪಟ್ಟಣದ ಬಾಲಲೀಲಾ ಮಹಾಂತ ಶಿವಯೋಗಿಗಳ ಕಲಾಭವನದಲ್ಲಿ ಪತ್ರಿಕಾ ದಿನಾಚರಣೆ ಹಾಗೂ ವೈದ್ಯರ ದಿನಾಚರಣೆ ಕಾರ್ಯಕ್ರಮ ನಡೆಯಲಿದೆ.

ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು ಸಾನ್ನಿಧ್ಯ ವಹಿಸಲಿದ್ದು, ಶಿವಣ್ಣ ನೀಲಗುಂದ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಎಂ.ಡಿ. ಬಟ್ಟೂರ ಅಧ್ಯಕ್ಷತೆ ವಹಿಸಲಿದ್ದಾರೆ.

ಜನಶ್ರೀ ಟೈಮ್ಸ್ ವಾಹಿನಿಯ ಸಂಪಾದಕ ಆನಂದಯ್ಯ ವಿರಕ್ತಮಠ ಮುಖ್ಯ ಉಪನ್ಯಾಸ ನೀಡಲಿದ್ದು, ಡಾ. ಎಸ್.ಸಿ. ಚವಡಿ, ಮಂಜುನಾಥ ಗುಳೇದ, ಶರಣು ದೊಡ್ಡೂರ, ಬಿ.ಜಿ. ಸುಬ್ಬಾಪೂರಮಠ, ರಾಜು ಹೆಬ್ಬಳ್ಳಿ ಹಾಗೂ ಮಹೇಶ ಛಬ್ಬಿ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ಪತ್ರಕರ್ತ ವಿ.ಡಿ. ಕಣವಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಂಕ್ಷಿಪ್ತ ಸುದ್ದಿಗಳು

## ರೈತರನ್ನು ಕೀಳಾಗಿ ಕಾಣಬೇಡಿ: ದೇವಪ್ಪ ಅಣ್ಣಿಗೇರಿ



**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ರೈತರು ದೇಶದ ಬೆನ್ನೆಲುಬು ಎಂದು ಹೇಳುವುದಷ್ಟೇ ಸಾಲದು. ಅವರನ್ನು ಗೌರವದಿಂದ ಕಾಣಬೇಕು ಹಾಗೂ ರೈತ ಬೆಳೆದ ಬೆಳೆಗೆ ನ್ಯಾಯಯುತ ಬೆಲೆ ದೊರೆಯುವ ವ್ಯವಸ್ಥೆ ಜಾರಿಯಾಗಬೇಕು ಎಂದು ಹಸಿರು ಸೇನೆ ರೈತ ಸಂಘದ ಅಧ್ಯಕ್ಷ ದೇವಪ್ಪ ಅಣ್ಣಿಗೇರಿ ಹೇಳಿದರು.

ಪಟ್ಟಣದಲ್ಲಿ ರೈತ ಹುತಾತ್ಮ ದಿನಾಚರಣೆ ಅಂಗವಾಗಿ ರೈತ ಸಂಘದ ನಾಮಫಲಕಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಪ್ರತಿಯೊಂದು ವಸ್ತುವಿಗೂ ಬೆಲೆ ನಿಗದಿಯಾಗುತ್ತದೆ. ಆದರೆ ರೈತ ಬೆಳೆದ ಬೆಳೆಗೆ ಮಾತ್ರ ಇಂದಿಗೂ ಬೆಲೆ ನಿರ್ಧರಿಸುವ ಹಕ್ಕು ರೈತರಿಗೆ ದೊರೆತಿಲ್ಲ. ತಮ್ಮ ಬೇಡಿಕೆಗಳ ಈಡೇರಿಕೆಗೆ ರೈತರು ಬೀದಿಗಿಳಿದು ಹೋರಾಟ ನಡೆಸುವ ಪರಿಸ್ಥಿತಿ ನಿರ್ಮಾಣವಾಗಿರುವುದು ವಿಷಾದನೀಯ ಎಂದು ಹೇಳಿದರು.

> **ಪ್ರತಿಯೊಂದು ವಸ್ತುವಿಗೂ ಬೆಲೆ ನಿಗದಿಯಾಗುತ್ತದೆ. ಆದರೆ ರೈತ ಬೆಳೆದ ಬೆಳೆಗೆ ಮಾತ್ರ ನ್ಯಾಯಯುತ ಬೆಲೆ ನಿರ್ಧರಿಸುವ ಹಕ್ಕು ಇಂದಿಗೂ ದೊರೆತಿಲ್ಲ. ರೈತರನ್ನು ಎಂದಿಗೂ ಕೀಳಾಗಿ ಕಾಣಬಾರದು.**
> – **ದೇವಪ್ಪ ಅಣ್ಣಿಗೇರಿ,** ಅಧ್ಯಕ್ಷರು, ಹಸಿರು ಸೇನೆ ರೈತ ಸಂಘ

ಈ ಸಂದರ್ಭದಲ್ಲಿ ಮುತ್ತಪ್ಪ ಬಳ್ಳಾರಿ, ಮುತ್ತಪ್ಪ ಪಲ್ಲೇದ, ಮುತ್ತಪ್ಪ ಜಾಧವ, ಶಂಕ್ರಯ್ಯ ಹಿರೇಮಠ, ಮಹಮ್ಮದಲಿ ಶೇಖ, ಬಸವರಾಜ ಕರಿಗಾರ, ದೇವಪ್ಪ ದೊಟಿಕಲ್, ಈರಣ್ಣ ದೊಟಿಕಲ್, ಬಸವರಾಜ ಕುಂದರಗಿ, ಸಿದ್ದಪ್ಪ ದೊಟಿಕಲ್, ಗಂಗಪ್ಪ ವಿಜಾಪೂರ ಉಪಸ್ಥಿತರಿದ್ದರು.

## ರಾಮಗಿರಿಯಲ್ಲಿ ವೀರನಗೌಡ ಪಾಟೀಲ ಸ್ಮರಣೆ; ಸಮಾಜಕ್ಕೆ ಆದರ್ಶ ಎಂದ ಹೂವಿನಶಿಗ್ಲಿ ಶ್ರೀ
## ಶಿಕ್ಷಣಕ್ಕಾಗಿ ಭೂಮಿ ದಾನ; ಮಹಾದಾನಿಗೆ ಭಾವಪೂರ್ಣ ನಮನ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಶರಣರ ಪರಂಪರೆಯಲ್ಲಿ ಕಾಯಕ ಮತ್ತು ದಾಸೋಹದ ಮೂಲಕ ಸಮಾಜಮುಖಿ ಕಾರ್ಯಗಳನ್ನು ನಡೆಸಿದ ಮಹನೀಯರಂತೆ, ಶಿಕ್ಷಣದ ಬೆಳವಣಿಗೆಗಾಗಿ ಅಮೂಲ್ಯ ಭೂಮಿಯನ್ನು ದಾನ ಮಾಡಿದ ಮಹಾದಾನಿ ದಿವಂಗತ ವೀರನಗೌಡ ಬಸನಗೌಡ ಪಾಟೀಲ ಅವರ ಸೇವೆ ಸಮಾಜ ಸದಾ ಸ್ಮರಿಸಲಿದೆ ಎಂದು ಹೂವಿನಶಿಗ್ಲಿ ವಿರಕ್ತಮಠದ ಶ್ರೀ ಚೆನ್ನವೀರ ಮಹಾಸ್ವಾಮೀಜಿ ಹೇಳಿದರು.

ತಾಲೂಕಿನ ರಾಮಗಿರಿ ಗ್ರಾಮದಲ್ಲಿ ಸಮಸ್ತ ಗ್ರಾಮಸ್ಥರ ವತಿಯಿಂದ ಆಯೋಜಿಸಿದ್ದ ಭಾವನಮನ ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದ ಅವರು, ಸಮಾಜದ ಅಭಿವೃದ್ಧಿಗೆ ಶಿಕ್ಷಣವೇ ಮೂಲ ಆಧಾರ. ಶಿಕ್ಷಣಕ್ಕಾಗಿ ತಮ್ಮ ಆಸ್ತಿಯನ್ನೇ ದಾನ ಮಾಡಿದ ಮಹನೀಯರ ಆದರ್ಶವನ್ನು ಪ್ರತಿಯೊಬ್ಬರೂ ಅನುಸರಿಸಬೇಕು ಎಂದು ಕರೆ ನೀಡಿದರು.

ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ ಮಾತನಾಡಿ, ರಾಮಗಿರಿಯ ಸರ್ಕಾರಿ ಪ್ರೌಢಶಾಲೆಯ ಶೈಕ್ಷಣಿಕ ಅಭಿವೃದ್ಧಿಗಾಗಿ ಸುಮಾರು ₹2 ಕೋಟಿ ಮೌಲ್ಯದ 1 ಎಕರೆ 10 ಗುಂಟೆ ಭೂಮಿಯನ್ನು ದಾನ ಮಾಡಿದ ವೀರನಗೌಡ ಪಾಟೀಲ ಅವರ ಸೇವೆ ಅನನ್ಯವಾಗಿದೆ. ಅವರ ಈ ದಾನದಿಂದ ಸಾವಿರಾರು ವಿದ್ಯಾರ್ಥಿಗಳ ಭವಿಷ್ಯ ಉಜ್ವಲವಾಗಲಿದ್ದು, ಅವರು ಸದಾ ಜನಮನದಲ್ಲಿ ಉಳಿಯಲಿದ್ದಾರೆ ಎಂದು ಹೇಳಿದರು.

ಸಮಾಜಸೇವಕ ಉಮೇಶ ಶೆಟ್ಟಿ (ಕಲಬುರಗಿ), ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಡಾ. ಆರ್.ಎನ್. ತೇರ್ಲ್ಕ, ಮಹಾಬಳೇಶ್ವರಪ್ಪ ಬೇವಿನಮರದ ಹಾಗೂ ಶಿಕ್ಷಕಿ ಮೈತ್ರಾದೇವಿ ಹಿರೇಮಠ ಮಾತನಾಡಿ, ವೀರನಗೌಡ ಪಾಟೀಲ ಅವರ ಸಮಾಜಮುಖಿ ಸೇವೆಯನ್ನು ಸ್ಮರಿಸಿದರು.

ಕಾರ್ಯಕ್ರಮದಲ್ಲಿ ಡಾ. ಎಸ್.ಬಿ. ಗುಡಗೇರಿ, ಮುಖ್ಯೋಪಾಧ್ಯಾಯಿನಿ ಜಯಶ್ರೀ ಹಿರೇಮಠ, ನಿವೃತ್ತ ಪೊಲೀಸ್ ಅಧಿಕಾರಿ ಶಂಕರ ರಾಗಿ, ಗಂಗಮ್ಮ ಕಾಳೆ, ಶಂಕರ ಗಂಜಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಬಸಣ್ಣ ಬೆಟಗೇರಿ, ಸಿ.ಬಿ. ಲಿಂಗಶೆಟ್ಟಿ, ಶಾರದಾಬಾಯಿ ವೀರನಗೌಡ ಪಾಟೀಲ, ರೂಪಾ ಪಾಟೀಲ, ವಿಜಯ ಹತ್ತಿಕಾಳ, ಶಿವಣ್ಣ ವಡಕಣ್ಣವರ, ಶ್ರೀನಿವಾಸ ಬಂಗೋಡಿ ಸೇರಿದಂತೆ ಕುಟುಂಬಸ್ಥರು, ಅಭಿಮಾನಿಗಳು ಹಾಗೂ ಗ್ರಾಮಸ್ಥರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ದಿವಂಗತ ವೀರನಗೌಡ ಪಾಟೀಲ ಅವರ ಪುತ್ರ, ಡಿವೈಎಸ್ಪಿ ಶಂಕರಗೌಡ ಪಾಟೀಲ ವಂದಿಸಿದರು. ಶಿವಣ್ಣ ಬೆಟಗೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಈಶ್ವರ ಮೆಡ್ಲೇರಿ ಪರಿಚಯಿಸಿದರು. ಪ್ರಿಯಾ ಜಿಗಳೂರ ಮತ್ತು ಲಾವಣ್ಯ ಪಾಟೀಲ ಪ್ರಾರ್ಥಿಸಿದರು. ಬಿ.ಎಫ್. ಹೆಬ್ಬಾಳ ಸ್ವಾಗತಿಸಿದರು. ಬಸವರಾಜ ಗಳಗನಾಥ ಹಾಗೂ ಮಂಜುನಾಥ ಅಂಗಡಿ ಕಾರ್ಯಕ್ರಮ ನಿರೂಪಿಸಿದರು.

## ಕಪ್ಪತಗುಡ್ಡ ಕುರಿತ ಕವನಗಳಿಗೆ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಆಶ್ರಯದಲ್ಲಿ ಆಗಸ್ಟ್ 2ರಂದು ಬೆಳಿಗ್ಗೆ ಜ. ಅನ್ನದಾನೀಶ್ವರ ಕನ್ನಡ ಸಾಹಿತ್ಯ ಭವನದಲ್ಲಿ ನಡೆಯಲಿರುವ ಪರಿಸರ ಜಾಗೃತಿ ಸಮಾವೇಶದ ಅಂಗವಾಗಿ ಉಸಹ್ಯಾದ್ರಿ ಬೆಟ್ಟಎಂದು ಖ್ಯಾತಿ ಪಡೆದ ಕಪ್ಪತಗುಡ್ಡ ಕುರಿತ ಮುಕ್ತ ಕವಿಗೋಷ್ಠಿಯನ್ನು ಆಯೋಜಿಸಲಾಗಿದೆ.

ಕವಿಗೋಷ್ಠಿಯಲ್ಲಿ ಕೇವಲ ಕಪ್ಪತಗುಡ್ಡ ವಿಷಯಾಧಾರಿತ ಕವನಗಳಿಗೆ ಮಾತ್ರ ಅವಕಾಶವಿದ್ದು, ಒಬ್ಬರು 20 ಸಾಲುಗಳೊಳಗಿನ ಒಂದು ಕವನವನ್ನು ವಾಚಿಸಬಹುದಾಗಿದೆ.

ಆಸಕ್ತ ಕವಿಗಳು ತಮ್ಮ ಕವನಗಳನ್ನು ಜುಲೈ 30ರೊಳಗೆ ವಾಟ್ಸಾಪ್ ಮೂಲಕ 8277187984 ಸಂಖ್ಯೆಗೆ ಕಳುಹಿಸಬೇಕು.

ಆಯ್ಕೆಯಾದ ಕವನಗಳನ್ನು ಸಮಾವೇಶದ ದಿನ ನಡೆಯುವ ಕವಿಗೋಷ್ಠಿಯಲ್ಲಿ ವಾಚಿಸಲು ಅವಕಾಶ ಕಲ್ಪಿಸಲಾಗುವುದು ಎಂದು ಕಸಾಪ ಕಾರ್ಯಕಾರಿಣಿ ಸದಸ್ಯ ಸಿ.ಕೆ. ಗಣಪ್ಪನವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅಂದಾನಗೌಡ ಪಾಟೀಲ ಜನ್ಮದಿನದ ಅಂಗವಾಗಿ ಸಮಾಜಮುಖಿ ಕಾರ್ಯಕ್ರಮ | ಶಿಕ್ಷಣಕ್ಕೆ ಉತ್ತೇಜನ ನೀಡಿದ ಅಭಿಮಾನಿಗಳು

# ಶಾಲಾ ಮಕ್ಕಳಿಗೆ ಕಲಿಕಾ ಸಾಮಗ್ರಿ ವಿತರಣೆ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಜನ್ಮದಿನವನ್ನು ವೈಯಕ್ತಿಕ ಸಂಭ್ರಮಕ್ಕೆ ಸೀಮಿತಗೊಳಿಸದೆ ಸಮಾಜಮುಖಿ ಕಾರ್ಯಗಳ ಮೂಲಕ ಆಚರಿಸುವುದು ಆದರ್ಶವಾಗಿದ್ದು, ಶಿಕ್ಷಣ ಮತ್ತು ಪರಿಸರ ಸಂರಕ್ಷಣೆಗೆ ಆದ್ಯತೆ ನೀಡುವ ಇಂತಹ ಕಾರ್ಯಗಳು ಯುವಜನತೆಗೆ ಮಾದರಿಯಾಗಿವೆ ಎಂದು ನಿಡಗುಂದಿಕೊಪ್ಪ ಶಾಖಾ ಶಿವಯೋಗ ಮಂದಿರದ ಪೂಜ್ಯ ಅಭಿನವ ಚನ್ನಬಸವ ಸ್ವಾಮೀಜಿ ಹೇಳಿದರು.

ಸಮೀಪದ ಬೂದಿಹಾಳ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಾಲಕೆರೆ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಹಾಗೂ ಹಿರಿಯ ಸಹಕಾರಿ ಧುರೀಣ ಅಂದಾನಗೌಡ ಪಾಟೀಲ ಅವರ 59ನೇ ಜನ್ಮದಿನದ ಅಂಗವಾಗಿ ಅಭಿಮಾನಿ ಬಳಗ ಆಯೋಜಿಸಿದ್ದ ಶಾಲಾ ಮಕ್ಕಳಿಗೆ ಉಚಿತ ಕಲಿಕಾ ಸಾಮಗ್ರಿ ವಿತರಣೆ ಹಾಗೂ ಸಸಿ ನೆಡುವ ಕಾರ್ಯಕ್ರಮದಲ್ಲಿ ಅವರು ಆಶೀರ್ವಚನ ನೀಡಿದರು.

ಜನ್ಮದಿನ ಎಂದರೆ ಕೇವಲ ಸಂಭ್ರಮ ಅಥವಾ ಅನಗತ್ಯ ಖರ್ಚು ಮಾಡುವುದಲ್ಲ. ಸಮಾಜಕ್ಕೆ ಉಪಯೋಗವಾಗುವ ಕಾರ್ಯಗಳ ಮೂಲಕ ಆಚರಿಸಿದಾಗ ಅದರ ನಿಜವಾದ ಅರ್ಥ ಸಾರ್ಥಕವಾಗುತ್ತದೆ. ಶಿಕ್ಷಣ, ಪರಿಸರ ಮತ್ತು ಸಮಾಜಸೇವೆಗೆ ಪ್ರೋತ್ಸಾಹ ನೀಡುವ ಕಾರ್ಯಗಳು ಎಲ್ಲರಿಗೂ ಮಾದರಿಯಾಗಬೇಕು ಎಂದು ಹೇಳಿದರು.



ರೋಣ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಮಿಥುನ ಪಾಟೀಲ ಮಾತನಾಡಿ, ಗ್ರಾಮೀಣ ಭಾಗದ ಮಕ್ಕಳಲ್ಲಿ ಶಿಕ್ಷಣದ ಬಗ್ಗೆ ಆಸಕ್ತಿ ಮೂಡಿಸಲು ಇಂತಹ ಕಾರ್ಯಕ್ರಮಗಳು ಅಗತ್ಯವಾಗಿವೆ. ಸರ್ಕಾರದ ಯೋಜನೆಗಳ ಜೊತೆಗೆ ಸಮಾಜದ ಮುಖಂಡರು ಮತ್ತು ದಾನಿಗಳು ಕೈಜೋಡಿಸಿದಾಗ ಶಿಕ್ಷಣ ಕ್ಷೇತ್ರದಲ್ಲಿ ಉತ್ತಮ ಫಲಿತಾಂಶ ಸಾಧ್ಯ ಎಂದು ಹೇಳಿದರು.

ಅಂದಾನಗೌಡ ಪಾಟೀಲ ಮಾತನಾಡಿ, ಸಮಾಜ ನೀಡಿರುವ ಪ್ರೀತಿ, ವಿಶ್ವಾಸ ಮತ್ತು ಆಶೀರ್ವಾದಕ್ಕೆ ಕೃತಜ್ಞತೆ ಸಲ್ಲಿಸಿದರು. ಗ್ರಾಮೀಣ ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣದ ಅವಕಾಶ ಕಲ್ಪಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ಶಿಕ್ಷಣ, ಆರೋಗ್ಯ ಹಾಗೂ ಸಾಮಾಜಿಕ ಕ್ಷೇತ್ರಗಳಲ್ಲಿ ತಮ್ಮ ಕೈಲಾದ ಸೇವೆಯನ್ನು ಮುಂದುವರಿಸುವ ಸಂಕಲ್ಪ ಹೊಂದಿದ್ದೇನೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ನೋಟ್ ಬುಕ್, ಪೆನ್, ಪೆನ್ಸಿಲ್ ಸೇರಿದಂತೆ ವಿವಿಧ ಕಲಿಕಾ ಸಾಮಗ್ರಿಗಳನ್ನು ವಿತರಿಸಲಾಯಿತು. ಇದೇ ವೇಳೆ ಶಾಲಾ ಆವರಣದಲ್ಲಿ ಸಸಿ ನೆಟ್ಟು ಪರಿಸರ ಸಂರಕ್ಷಣೆಯ ಸಂದೇಶ ಸಾರಲಾಯಿತು.

ನರೇಗಲ್ಲ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶರಣಪ್ಪ ಬೆಟಗೇರಿ, ಶಶಿಧರ ಹೂಗಾರ, ಅಲ್ಲಾಭಕ್ಷ ನದಾಫ್, ಗಿರೀಶಗೌಡ ಮುಲ್ಕಿಪಾಟೀಲ ಸೇರಿದಂತೆ ಹಲವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ಎ.ಆರ್. ಮಲ್ಲನಗೌಡ, ವೀರಣ್ಣ ಹಳ್ಳಿ, ಚನ್ನಬಸವ ಅರಹುಣಸಿ, ಅಂದಪ್ಪ ಬಿಚ್ಚೂರು, ಸಂಗನಬಸಪ್ಪ ಹಾದಿಮನಿ, ಶಿವಣ್ಣ ರಾಟಿಮನಿ, ಸಂತೋಷ ಹನುಮಸಾಗರ, ಚನ್ನಪ್ಪ ಕರಮುಡಿ, ಮುತ್ತು ಮೇಟಿ, ಎಸ್‌ಡಿಎಂಸಿ ಅಧ್ಯಕ್ಷ ಯಲ್ಲಪ್ಪಗೌಡ ಭರಮಗೌಡ್ರ, ಎಸ್.ಎಚ್. ಸೂಡಿ, ಕಳಕಪ್ಪ ಬೆಟಗೇರಿ, ಸೋಮನಗೌಡ ಯಲ್ಲಪ್ಪಗೌಡ್ರ, ಶಿವಮೂರ್ತಿ ಕರಮುಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಹಾಲಕೆರೆ, ನಿಡಗುಂದಿ, ನರೇಗಲ್ಲ, ನಿಡಗುಂದಿಕೊಪ್ಪ, ಜಕ್ಕಲಿ, ತೋಟಗಂಟಿ ಹಾಗೂ ಮಲ್ಲಾಪುರ ಸೇರಿದಂತೆ ವಿವಿಧ ಗ್ರಾಮಗಳಿಂದ ಆಗಮಿಸಿದ್ದ ಗ್ರಾಮಸ್ಥರು, ಪಾಲಕರು, ವಿದ್ಯಾರ್ಥಿಗಳು ಹಾಗೂ ಅಭಿಮಾನಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅಂದಾನಗೌಡ ಪಾಟೀಲ ಅವರಿಗೆ ಜನ್ಮದಿನದ ಶುಭಾಶಯ ಕೋರಿದರು.

> **ಗ್ರಾಮೀಣ ಭಾಗದ ಮಕ್ಕಳಲ್ಲಿ ಶಿಕ್ಷಣದ ಬಗ್ಗೆ ಆಸಕ್ತಿ ಮೂಡಿಸಲು ಇಂತಹ ಕಾರ್ಯಕ್ರಮಗಳು ಅತ್ಯಂತ ಅಗತ್ಯ. ಸರ್ಕಾರದ ಯೋಜನೆಗಳ ಜೊತೆಗೆ ಸಮಾಜದ ಮುಖಂಡರು ಹಾಗೂ ದಾನಿಗಳು ಕೈಜೋಡಿಸಿದಾಗ ಶಿಕ್ಷಣ ಕ್ಷೇತ್ರದಲ್ಲಿ ಉತ್ತಮ ಫಲಿತಾಂಶ ಸಾಧ್ಯ.**
> – **ಮಿಥುನ್ ಪಾಟೀಲ,** ಅಧ್ಯಕ್ಷರು, ರೋಣ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ

### 17 ಭಾಷೆಗಳಲ್ಲಿ 48 ಸಾವಿರಕ್ಕೂ ಅಧಿಕ ಗೀತೆಗಳ ಮೂಲಕ ಸಂಗೀತ ಲೋಕಕ್ಕೆ ಅಮೂಲ್ಯ ಕೊಡುಗೆ: ತೋಂಟದ ಸಿದ್ಧರಾಮ ಶ್ರೀ

## ಚಲನಚಿತ್ರ ಲೋಕದ ದಂತಕಥೆ ಎಸ್. ಜಾನಕಿ



**ವಿಜಯಸಾಕ್ಷಿ ಸುದ್ದಿ, ಗದಗ**

ಕನ್ನಡ ಸೇರಿದಂತೆ 17 ಭಾಷೆಗಳಲ್ಲಿ 48 ಸಾವಿರಕ್ಕೂ ಅಧಿಕ ಗೀತೆಗಳನ್ನು ಹಾಡುವ ಮೂಲಕ ಬದುಕಿರುವಾಗಲೇ ಚಲನಚಿತ್ರ ಸಂಗೀತ ಲೋಕದ ದಂತಕಥೆಯಾಗಿ ಎಸ್. ಜಾನಕಿ ಗುರುತಿಸಿಕೊಂಡಿದ್ದಾರೆ ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2807ನೇ ಶಿವಾನುಭವ ಕಾರ್ಯಕ್ರಮದಲ್ಲಿ ಸಾನ್ನಿಧ್ಯ ವಹಿಸಿ ಮಾತನಾಡಿದ ಅವರು, ಕೋಗಿಲೆಯ ಧ್ವನಿಯಂತೆ ಎಸ್. ಜಾನಕಿ ಅವರ ಕಂಠಸಿರಿ ಇಂಪಾಗಿದ್ದು, ತಮ್ಮ ಗಾಯನದ ಮೂಲಕ ಕೋಟ್ಯಂತರ ಸಂಗೀತಾಭಿಮಾನಿಗಳ ಮನಸ್ಸು ಗೆದ್ದಿದ್ದಾರೆ. ಸಾವಿರಾರು ಹಾಡುಗಳಿಗೆ ಜೀವ ತುಂಬಿರುವ ಅವರ ಸಾಧನೆ ಸದಾ ಸ್ಮರಣೀಯ ಎಂದು ಹೇಳಿದರು.

ಇದೇ ವೇಳೆ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರ ಪತ್ನಿ ಚೆನ್ನಮ್ಮ ಅವರ ನಿಧನಕ್ಕೆ ಸಂತಾಪ ಸೂಚಿಸಿದ ಶ್ರೀಗಳು, ಕುಟುಂಬವನ್ನು ಆದರ್ಶ ರೀತಿಯಲ್ಲಿ ಮುನ್ನಡೆಸಿದ ಚೆನ್ನಮ್ಮ ಅವರ ಬದುಕು ಎಲ್ಲರಿಗೂ ಮಾದರಿಯಾಗಿದೆ. ಅವರ ಆತ್ಮಕ್ಕೆ ಬಸವಾದಿ ಶರಣರು ಶಾಂತಿ ನೀಡಲಿ ಹಾಗೂ ಕುಟುಂಬಕ್ಕೆ ದುಃಖ ಭರಿಸುವ ಶಕ್ತಿ ನೀಡಲಿ ಎಂದು ಪ್ರಾರ್ಥಿಸಿದರು.

ವಿರುಪಾಕ್ಷಗೌಡ ಪಾಟೀಲ ಮಾತನಾಡಿ, 1951ರಲ್ಲಿ ಮೈಸೂರಿನ ಮಹಾರಾಜರು ಗದಗಕ್ಕೆ ಭೇಟಿ ನೀಡಿದ್ದ ಸಂದರ್ಭ ಹಾಗೂ ಲಿಂಗಾಯತ ಸ್ವತಂತ್ರ ಧರ್ಮ ಹೋರಾಟದ ಆರಂಭಿಕ ಬೆಳವಣಿಗೆಗಳ ಕುರಿತು ಮಾಹಿತಿ ನೀಡಿದರು.

ತೋಂಟದಾರ್ಯ ಶಿಕ್ಷಣ ಸಂಸ್ಥೆಯ ಪ್ರೌಢಶಾಲಾ ಶಿಕ್ಷಕ ಎಸ್.ಎನ್. ಕಲ್ಲಿಗನೂರ ಅವರ ನಿಧನಕ್ಕೂ ಸಭೆಯಲ್ಲಿ ಸಂತಾಪ ಸೂಚಿಸಲಾಯಿತು.

> **ಕನ್ನಡ ಸೇರಿದಂತೆ 17 ಭಾಷೆಗಳಲ್ಲಿ 48 ಸಾವಿರಕ್ಕೂ ಅಧಿಕ ಗೀತೆಗಳನ್ನು ಹಾಡುವ ಮೂಲಕ ಎಸ್. ಜಾನಕಿ ಬದುಕಿರುವಾಗಲೇ ಚಲನಚಿತ್ರ ಸಂಗೀತ ಲೋಕದ ದಂತಕಥೆಯಾಗಿದ್ದಾರೆ. ಅವರ ಗಾಯನ ಮುಂದಿನ ಪೀಳಿಗೆಗೂ ಪ್ರೇರಣೆಯಾಗಲಿದೆ.**
> – **ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು**

ಈ ಸಂದರ್ಭದಲ್ಲಿ ರಾಣಿ ಚೆನ್ನಮ್ಮ ವಿವಿಧೋದ್ದೇಶಗಳ ಸಹಕಾರಿ ಸಂಘದ ಅಧ್ಯಕ್ಷೆ ಶಿವಲೀಲಾ ಪ್ರಕಾಶ ಅಕ್ಕಿ ಹಾಗೂ ಲಿಂಗಾಯತ ಪ್ರಗತಿಶೀಲ ಸಂಘದ ಮಾಜಿ ಅಧ್ಯಕ್ಷ ಅಮರೇಶ ಅಂಗಡಿ ಅವರನ್ನು ಸನ್ಮಾನಿಸಲಾಯಿತು.

ಶ್ರೀನಿವಾಸ ದತ್ತಾತ್ರೇಯ ಕುಲಕರ್ಣಿ, ಶಿಲ್ಪಾ ವಿ. ಕುರಹಟ್ಟಿ, ಸುನಂದ ಜಾನೋಪಂಥರ, ಲಲಿತಾ ಇಂಗಳಹಳ್ಳಿ, ಎಂ.ಎಂ. ಮಂಗಳೂರು ಹಾಗೂ ಭುವನೇಶ್ವರಿ ಹಿರೇಮಠ ಅವರು ಎಸ್. ಜಾನಕಿ ಹಾಡಿರುವ ಗೀತೆಗಳನ್ನು ಪ್ರಸ್ತುತಪಡಿಸಿದರು.

ವಚನ ಸಂಗೀತವನ್ನು ಮೃತ್ಯುಂಜಯ ಹಿರೇಮಠ, ಧರ್ಮಗ್ರಂಥ ಪಠಣವನ್ನು ವರ್ಷ ಯಳವತ್ತಿಮಠ ಹಾಗೂ ವಚನ ಚಿಂತನವನ್ನು ವೇದಾವತಿ ಮಠದ ನಡೆಸಿಕೊಟ್ಟರು. ದಾಸೋಹ ಸೇವೆಯನ್ನು ಎಸ್.ಎ. ಪಾಟೀಲ ಮತ್ತು ಸಹೋದರರು ಹಾಗೂ ರತ್ನಕ್ಕ ಪಾಟೀಲ ವಹಿಸಿಕೊಂಡಿದ್ದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಡಾ. ಉಮೇಶ ಪುರದ ಸ್ವಾಗತಿಸಿದರು. ರಮೇಶ ಕಲ್ಲನಗೌಡರ ಹಾಗೂ ವಿದ್ಯಾ ಗಂಜಿಹಾಳ ಕಾರ್ಯಕ್ರಮ ನಿರೂಪಿಸಿದರು.

### ಸಿದ್ಧಾಂತ ಶಿಖಾಮಣಿ ಪ್ರವಚನ ಮಾಲಿಕೆ, ಇಷ್ಟಲಿಂಗ ಮಹಾಪೂಜೆ ಮಹಾಮಂಗಲ ಸಮಾರೋಪದಲ್ಲಿ ಕಾಶಿ ಶ್ರೀಗಳು ಅಭಿಪ್ರಾಯ

## ಭಾವ ಶುದ್ಧವಿದ್ದರೆ ಬದುಕೂ ಶುದ್ಧವಾಗುತ್ತದೆ



**ವಿಜಯಸಾಕ್ಷಿ ಸುದ್ದಿ, ಗದಗ**

ನಾವು ಯಾವ ಭಾವನೆಯೊಂದಿಗೆ ಕೆಲಸ ಆರಂಭಿಸುತ್ತೇವೆಯೋ ಅದಕ್ಕೆ ತಕ್ಕಂತೆ ಪ್ರತಿಫಲ ದೊರೆಯುತ್ತದೆ. ಒಳ್ಳೆಯ ಭಾವನೆಯಿಂದ ಮಾಡಿದ ಕೆಲಸ ಉತ್ತಮ ಫಲ ನೀಡುತ್ತದೆ. ಕೆಟ್ಟ ಭಾವನೆಯಿಂದ ಮಾಡಿದ ಕೆಲಸದ ದುಷ್ಪರಿಣಾಮ ಮೊದಲು ನಮಗೇ ಆಗುತ್ತದೆ. ಆದ್ದರಿಂದ ಪ್ರತಿಯೊಂದು ಕಾರ್ಯವನ್ನೂ ಶುದ್ಧ ಭಾವನೆಯಿಂದಲೇ ಮಾಡಬೇಕು ಎಂದು ಕಾಶೀ ಜಂಗಮವಾಡಿಮಠದ ಜ.ಡಾ. ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ನಗರದ ಮಾಂಗಲ್ಯ ಮಂದಿರದಲ್ಲಿ ಗದಗ-ಬೆಟಗೇರಿ ಪಂಚಾಚಾರ್ಯ ಸೇವಾ ಸಂಘದ ವತಿಯಿಂದ ಆಯೋಜಿಸಿದ್ದ ಆರು ದಿನಗಳ ಉಶ್ರೀ ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಪ್ರವಚನ ಮಾಲಿಕೆಹಾಗೂ ಇಷ್ಟಲಿಂಗ ಮಹಾಪೂಜೆ ಮಹಾಮಂಗಲ ಸಮಾರೋಪ ಸಮಾರಂಭದಲ್ಲಿ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಬಾಳೆಹೊನ್ನೂರಿನ ರಂಭಾಪುರಿ ಪೀಠದ ಮಾರ್ಗದರ್ಶನದಲ್ಲಿ ಕಾರ್ಯಕ್ರಮ ಅಚ್ಚುಕಟ್ಟಾಗಿ ನೆರವೇರಿದ್ದು, ಅದರ ಯಶಸ್ಸಿಗೆ ಶ್ರಮಿಸಿದ ಕಾರ್ಯಕರ್ತರು, ದಾನಿಗಳು ಹಾಗೂ ಸೇವಾಕರ್ತರನ್ನು ಗೌರವಿಸಿರುವುದು ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

> **ಒಳ್ಳೆಯ ಭಾವನೆಯಿಂದ ಮಾಡಿದ ಕೆಲಸದ ಫಲವೂ ಒಳ್ಳೆಯದೇ ಆಗುತ್ತದೆ. ಯಾವುದೇ ಕಾರ್ಯ ಆರಂಭಿಸುವ ಮುನ್ನ ಮನಸ್ಸಿನ ಭಾವ ಶುದ್ಧವಾಗಿದ್ದರೆ ಬದುಕಿನ ಪ್ರತಿಫಲವೂ ಶುದ್ಧವಾಗಿರುತ್ತದೆ.**
> – **ಜ.ಡಾ. ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು**

ಭಾರತೀಯ ಸಂಸ್ಕೃತಿಯಲ್ಲಿ ಮಾತೃದೇವೋ ಭವ, ಪಿತೃದೇವೋ ಭವ, ಆಚಾರ್ಯದೇವೋ ಭವ ಹಾಗೂ ಅತಿಥಿದೇವೋ ಭವ ಎಂಬ ನಾಲ್ಕು ಮೌಲ್ಯಗಳಿಗೆ ವಿಶೇಷ ಸ್ಥಾನವಿದೆ. ಶರಣ ಸಂಸ್ಕೃತಿಯಲ್ಲಿ ಅತಿಥಿಯನ್ನು ಸಾಕ್ಷಾತ್ ಶಿವಸ್ವರೂಪವೆಂದು ಕಂಡಿದ್ದು, ಜಂಗಮರಿಗೆ ಒಳ್ಳೆಯ ಭಾವನೆಯಿಂದ ಸೇವೆ ಸಲ್ಲಿಸುವುದೇ ನಿಜವಾದ ಪೂಜೆ ಎಂದು ಹೇಳಿದರು.

ಸಾನ್ನಿಧ್ಯ ವಹಿಸಿದ್ದ ಬಾಳೆಹೊನ್ನೂರಿನ ರಂಭಾಪುರಿ ಪೀಠದ ಜ.ಡಾ. ಪ್ರಸನ್ನ ರೇಣುಕ ವೀರಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದರು ಆಶೀರ್ವಚನ ನೀಡಿದರು.

ಕಾರ್ಯಕ್ರಮದ ನೇತೃತ್ವವನ್ನು ಸೂಡಿ-ಗದಗ ಜುಕ್ತಿಹಿರೇಮಠದ ಡಾ. ಕೊಟ್ಟೂರಬಸವೇಶ್ವರ ಶಿವಾಚಾರ್ಯ ಸ್ವಾಮಿಗಳು ವಹಿಸಿದ್ದರು. ನರೇಗಲ್ಲ ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳು ಪ್ರಾಸ್ತಾವಿಕವಾಗಿ ಮಾತನಾಡಿದರು. ಅಡ್ನೂರಿನ ಅಭಿನವ ಪಂಚಾಕ್ಷರ ಶಿವಾಚಾರ್ಯ ಸ್ವಾಮಿಗಳು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಎಸ್.ಎಸ್. ಮೇಟಿ, ವಿಜಯಕುಮಾರ ಹಿರೇಮಠ, ಎಸ್.ಎಸ್. ಪಾಟೀಲ, ಈಶ್ವರಯ್ಯ ಹಿರೇಮಠ, ಎಸ್.ವಿ. ಶಿವಕಾಳಿಮಠ, ರುದ್ರಯ್ಯ ಹಿರೇಮಠ, ರಾಜೀವ ಶೆಟ್ಟಿ, ಬಸವರಾಜ ಬಿಂಗಿ, ಗಂಗಾಧರ ಮಲ್ಲಾಡದ, ವಿ.ಕೆ. ಗುರುಮಠ, ಪ್ರಶಾಂತ ತಂಬ್ರಳ್ಳಿಮಠ, ಮಲ್ಲಿಕಾರ್ಜುನ ಹುಬಳೀಮಠ, ಶ್ರೀಕಾಂತ ಲಕ್ಕುಂಡಿ, ಪಾರ್ವತಿ ಶಾಬಾದಿಮಠ, ಶಾರದಾ ತಡಸದ, ಬಸವರಾಜ ಗಾಳಪ್ಪನವರ, ವೀರಭದ್ರಯ್ಯ ಮುದಗಲ್ಲ, ಪರಪ್ಪ ಗುಡಿಸಾಗರ ಸೇರಿದಂತೆ ಹಲವರನ್ನು ಸನ್ಮಾನಿಸಲಾಯಿತು. ವೀರೇಶ ಕಿತ್ತೂರ ಪ್ರಾರ್ಥಿಸಿದರು. ಮಂಜುನಾಥ ಬೇಲೇರಿ ಸ್ವಾಗತಿಸಿದರು. ಚಂದ್ರು ಬಾಳಿಹಳ್ಳಿಮಠ ಕಾರ್ಯಕ್ರಮ ನಿರೂಪಿಸಿದರು. ಅಜ್ಜಣ್ಣ ಮಲ್ಲಾಡದ ವಂದಿಸಿದರು.

### ತಪ್ಪಿತಸ್ಥ ಅಧಿಕಾರಿಗಳ ಅಮಾನತು, ಸಂಬಂಧಿತ ಸಚಿವರ ರಾಜೀನಾಮೆಗೆ ಎಂ.ಎಸ್. ನಾಗರಕಟ್ಟಿ ಒತ್ತಾಯ

# ನೀಟ್ ಅಕ್ರಮಕ್ಕೆ ಕಡಿವಾಣ ಹಾಕಿ

**ವಿಜಯಸಾಕ್ಷಿ ಸುದ್ದಿ, ಗದಗ**

ನೀಟ್ (NEET) ಪರೀಕ್ಷೆಯಲ್ಲಿ ಕೇಳಿಬಂದಿರುವ ಅಕ್ರಮಗಳು ದೇಶದ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯದ ಮೇಲೆ ಕರಿನೆರಳು ಬೀರುತ್ತಿದ್ದು, ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಜರುಗಿಸಿ ಪರೀಕ್ಷಾ ವ್ಯವಸ್ಥೆಯಲ್ಲಿ ಪಾರದರ್ಶಕತೆ ಕಾಪಾಡಬೇಕು ಎಂದು ಉತ್ತರ ಕರ್ನಾಟಕ ಪದವೀಧರ ಒಕ್ಕೂಟದ ರಾಜ್ಯಾಧ್ಯಕ್ಷ ಎಂ.ಎಸ್. ನಾಗರಕಟ್ಟೆ ಆಗ್ರಹಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ನವದೆಹಲಿಯ ಜಂತರ್ ಮಂತರ್‌ನಲ್ಲಿ ನಡೆಯುತ್ತಿರುವ ಅಹಿಂಸಾತ್ಮಕ ಉಪವಾಸ ಸತ್ಯಾಗ್ರಹಕ್ಕೆ ಬೆಂಬಲ ವ್ಯಕ್ತಪಡಿಸಿದ್ದು, ನೀಟ್ ಪರೀಕ್ಷೆಯಲ್ಲಿ ನಡೆದಿರುವ ಅಕ್ರಮಗಳ ಕುರಿತು ಕೇಂದ್ರ ಸರ್ಕಾರ ಯಾವುದೇ ವಿಳಂಬ ಮಾಡದೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ವೈದ್ಯರಾಗುವ ಕನಸಿನೊಂದಿಗೆ ವರ್ಷಗಳ ಕಾಲ ಕಠಿಣ ಪರಿಶ್ರಮ ಪಡುವ ಲಕ್ಷಾಂತರ ವಿದ್ಯಾರ್ಥಿಗಳ ಶ್ರಮಕ್ಕೆ ನ್ಯಾಯ ಸಿಗಬೇಕು. ಪರೀಕ್ಷೆಯಲ್ಲಿನ ಭ್ರಷ್ಟಾಚಾರ ಅಥವಾ ಲೋಪಗಳಿಂದ ಅರ್ಹ ವಿದ್ಯಾರ್ಥಿಗಳಿಗೆ



ಅನ್ಯಾಯವಾಗಬಾರದು. ಪರೀಕ್ಷೆಯ ಪಾರದರ್ಶಕತೆಯೇ ವಿದ್ಯಾರ್ಥಿಗಳ ಭವಿಷ್ಯದ ಭದ್ರತೆಗೆ ಮೂಲಾಧಾರವಾಗಿದೆ ಎಂದು ಅವರು ಹೇಳಿದ್ದಾರೆ. ನೀಟ್ ಅಕ್ರಮದಲ್ಲಿ ಭಾಗಿಯಾಗಿರುವ ಹಾಗೂ ನಿರ್ಲಕ್ಷ್ಯ ವಹಿಸಿರುವ ಸಂಬಂಧಪಟ್ಟ ಎಲ್ಲ ಅಧಿಕಾರಿಗಳನ್ನು ತಕ್ಷಣ ಸೇವೆಯಿಂದ ಅಮಾನತುಗೊಳಿಸಬೇಕು. ಪ್ರಕರಣದ ನೈತಿಕ ಹೊಣೆ ಹೊತ್ತು ಸಂಬಂಧಿತ ಸಚಿವರು ರಾಜೀನಾಮೆ ನೀಡಬೇಕು. ಹಗರಣದ ಸಂಪೂರ್ಣ ಸತ್ಯ ಹೊರಬರಲು ಉನ್ನತ ಮಟ್ಟದ ನಿಷ್ಪಕ್ಷಪಾತ ತನಿಖೆ ನಡೆಸಿ ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ವಿಧಿಸಬೇಕು ಎಂದು ಒತ್ತಾಯಿಸಿದ್ದಾರೆ.

ಕಷ್ಟಪಟ್ಟು ವ್ಯಾಸಂಗ ಮಾಡಿದ ಯಾವುದೇ ವಿದ್ಯಾರ್ಥಿಗೆ ಅನ್ಯಾಯವಾಗದಂತೆ ಕೇಂದ್ರ ಸರ್ಕಾರ ತಕ್ಷಣವೇ ನ್ಯಾಯಯುತ ಪರಿಹಾರ ಹಾಗೂ ಅಗತ್ಯ ಕ್ರಮಗಳನ್ನು ಪ್ರಕಟಿಸಬೇಕು. ಭ್ರಷ್ಟಾಚಾರ ಮುಕ್ತ ಹಾಗೂ ಪಾರದರ್ಶಕ ಶಿಕ್ಷಣ ವ್ಯವಸ್ಥೆ ನಿರ್ಮಾಣ ಇಂದಿನ ತುರ್ತು ಅಗತ್ಯವಾಗಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಪ್ರಜಾಪ್ರಭುತ್ವದಲ್ಲಿ ಅಹಿಂಸಾತ್ಮಕ ಹೋರಾಟಗಳಿಗೆ ವಿಶೇಷ ಸ್ಥಾನವಿದ್ದು, ಜಂತರ್ ಮಂತರ್‌ನಲ್ಲಿ ನಡೆಯುತ್ತಿರುವ ಸತ್ಯಾಗ್ರಹಕ್ಕೆ ಸರ್ಕಾರ ಸಕಾರಾತ್ಮಕವಾಗಿ ಸ್ಪಂದಿಸಿ ವಿದ್ಯಾರ್ಥಿಗಳ ಆತಂಕ ನಿವಾರಿಸಬೇಕು ಎಂದು ಎಂ.ಎಸ್. ನಾಗರಕಟ್ಟೆ ಆಗ್ರಹಿಸಿದ್ದಾರೆ.

> **ನೀಟ್ ಅಕ್ರಮಕ್ಕೆ ಕಾರಣರಾದ ಎಲ್ಲ ಅಧಿಕಾರಿಗಳನ್ನು ತಕ್ಷಣ ಅಮಾನತುಗೊಳಿಸಿ, ಸಂಬಂಧಿತ ಸಚಿವರ ರಾಜೀನಾಮೆ ಪಡೆಯಬೇಕು. ಕಷ್ಟಪಟ್ಟು ಓದಿದ ವಿದ್ಯಾರ್ಥಿಗಳಿಗೆ ಯಾವುದೇ ಅನ್ಯಾಯವಾಗದಂತೆ ಕೇಂದ್ರ ಸರ್ಕಾರ ನ್ಯಾಯ ಒದಗಿಸಬೇಕು.**
> – **ಎಂ.ಎಸ್. ನಾಗರಕಟ್ಟೆ,** ರಾಜ್ಯಾಧ್ಯಕ್ಷರು, ಉತ್ತರ ಕರ್ನಾಟಕ ಪದವೀಧರ ಒಕ್ಕೂಟ

### ವೈವಿಧ್ಯಮಯ ಚಟುವಟಿಕೆಗಳಿಂದ ಆತ್ಮವಿಶ್ವಾಸ, ಸೃಜನಶೀಲತೆ ಬೆಳೆಸುವ ಕಾರ್ಯಕ್ರಮ

## ಸಂಭ್ರಮ ಶನಿವಾರದಿಂದ ಮಕ್ಕಳ ಪ್ರತಿಭೆಗೆ ವೇದಿಕೆ



**ವಿಜಯಸಾಕ್ಷಿ ಸುದ್ದಿ, ಗದಗ**

ಸಂಭ್ರಮ ಶನಿವಾರ ಕಾರ್ಯಕ್ರಮವು ಮಕ್ಕಳಲ್ಲಿ ಅಡಗಿರುವ ಪ್ರತಿಭೆಯನ್ನು ಅನಾವರಣಗೊಳಿಸುವುದರ ಜೊತೆಗೆ ಆತ್ಮವಿಶ್ವಾಸ, ಸೃಜನಶೀಲತೆ, ನಾಯಕತ್ವ ಹಾಗೂ ಸಹಕಾರ ಮನೋಭಾವ ಬೆಳೆಸುವ ಪರಿಣಾಮಕಾರಿ ವೇದಿಕೆಯಾಗಿದೆ ಎಂದು ಸಂಪನ್ಮೂಲ ವ್ಯಕ್ತಿ ಕವಿತಾ ದಂಡಿನ ಹೇಳಿದರು.

ನಗರದ ಒಕ್ಕಲಗೇರಿ ಸರ್ಕಾರಿ ಶಾಲೆ ನಂ.3ರಲ್ಲಿ ಸರ್ಕಾರದ ಮಹತ್ವಾಕಾಂಕ್ಷಿ ಉಮಾಸಿಕ ಸಂಭ್ರಮ ಶನಿವಾರಕಾರ್ಯಕ್ರಮದಲ್ಲಿ ಮಾದಕ ವಸ್ತುಗಳ ಬಳಕೆ ತಡೆಗಟ್ಟುವಿಕೆ ಕುರಿತು ಮಕ್ಕಳೊಂದಿಗೆ ಸಂವಾದ ನಡೆಸಿ ಅವರು ಮಾತನಾಡಿದರು.

ಮಕ್ಕಳು ಸಂತೋಷದಿಂದ ವಿವಿಧ ಚಟುವಟಿಕೆಗಳಲ್ಲಿ ಭಾಗವಹಿಸುವ ಮೂಲಕ ಸಮಗ್ರ ಕಲಿಕೆಗೆ ಅವಕಾಶ ದೊರೆಯುತ್ತದೆ. ಮಾದಕ ವಸ್ತುಗಳ ಬಳಕೆ ವ್ಯಕ್ತಿಯ ಆರೋಗ್ಯ, ಕುಟುಂಬ ಹಾಗೂ ಸಮಾಜದ ಮೇಲೆ ದುಷ್ಪರಿಣಾಮ ಬೀರುವುದರಿಂದ ವಿದ್ಯಾರ್ಥಿಗಳು ಅಂತಹ ದುಶ್ಚಟಗಳಿಂದ ದೂರವಿರುವುದರ ಜೊತೆಗೆ ಇತರರಲ್ಲೂ ಜಾಗೃತಿ ಮೂಡಿಸಬೇಕು ಎಂದು ಕರೆ ನೀಡಿದರು. ಮುಖ್ಯೋಪಾಧ್ಯಾಯಿನಿ ಎಸ್. ಎಸ್. ಹಿರೇಮಠ ಮಾತನಾಡಿ, ಸಂಭ್ರಮ ಶನಿವಾರ ಕಾರ್ಯಕ್ರಮವು ಆಟದೊಂದಿಗೆ ಪಾಠ ಕಲಿಸುವ ಸೃಜನಾತ್ಮಕ ಯೋಜನೆಯಾಗಿದೆ. ಪಾಲಕರು ಶಾಲೆಗೆ ಭೇಟಿ ನೀಡಿ ಮಕ್ಕಳ ಪ್ರತಿಭೆಗೆ ಪ್ರೋತ್ಸಾಹ ನೀಡಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿ.ಕೆ. ಕಾಳೆ, ಎಸ್.ಬಿ. ಬಾಗೂರ, ಕವಿತಾ ಪಾಟೀಲ, ಮಂಜುಳಾ ಅನಂತಪೂರ, ಶ್ರೀದೇವಿ ಹೆಬಸೂರ, ಲಕ್ಷ್ಮಿ, ಸಾವಿತ್ರಿ, ನಿರ್ಮಲಾ ಅಕ್ಕಿ, ಕಸ್ತೂರಿ ಹೊಂಬಳ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಸಂಕ್ಷಿಪ್ತ ಸುದ್ದಿಗಳು

## ಪ್ರತಿಭಾವಂತ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ತಾಲೂಕಿನ ಸಮಸ್ತ ಮಾದಿಗ ಸಮಾಜದ ವತಿಯಿಂದ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಶೇ.80ಕ್ಕಿಂತ ಹೆಚ್ಚು ಅಂಕ ಗಳಿಸಿದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಜುಲೈ 26ರಂದು ಬೆಳಿಗ್ಗೆ 10 ಗಂಟೆಗೆ ಚಿಂತ್ರಪಳ್ಳಿಯ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಆಯೋಜಿಸಲಾಗಿದೆ.

2026ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಶೇ.80ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳು ಆಧಾರ್ ಕಾರ್ಡ್, ಅಂಕಪಟ್ಟಿ ಹಾಗೂ ಒಂದು ಭಾವಚಿತ್ರವನ್ನು ಸಲ್ಲಿಸಿ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಸಮಾಜದ ಮುಖಂಡರು ಮನವಿ ಮಾಡಿದ್ದಾರೆ.

ಈಗಾಗಲೇ ಹಲವಾರು ವಿದ್ಯಾರ್ಥಿಗಳ ದಾಖಲೆಗಳನ್ನು ಸಂಗ್ರಹಿಸಲಾಗಿದ್ದು, ಇನ್ನೂ ಅರ್ಹ ವಿದ್ಯಾರ್ಥಿಗಳಿದ್ದರೆ ಅಗತ್ಯ ದಾಖಲೆಗಳನ್ನು ಶೀಘ್ರ ಸಲ್ಲಿಸುವಂತೆ ಕೋರಲಾಗಿದೆ.

ಕಾರ್ಯಕ್ರಮವನ್ನು ಸಮಾಜದ ಹಿರಿಯರು, ಯುವಕರು ಹಾಗೂ ಮುಖಂಡರ ಸಹಕಾರದೊಂದಿಗೆ ಆಯೋಜಿಸಲಾಗುತ್ತಿದೆ. ಕಾರ್ಯಕ್ರಮದ ಹೆಸರಿನಲ್ಲಿ ಯಾರಾದರೂ ಹಣದ ಬೇಡಿಕೆ ಇಟ್ಟರೆ ಯಾವುದೇ ಕಾರಣಕ್ಕೂ ಹಣ ನೀಡಬಾರದು ಎಂದು ಸಾರ್ವಜನಿಕರಿಗೆ ಮನವಿ ಮಾಡಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಪರಶುರಾಮ್ ಹೆಗ್ಡಳ್, ಮರಿಯಪ್ಪ ದಶಮಾಪುರ, ಪ್ರಭಾಕರ ಆನಂದಳ್ಳಿ, ನಾಗರಾಜ್ ಕಲ್ಲಹಳ್ಳಿ, ರಮೇಶ್ ಚಿಂತ್ರಪಳ್ಳಿ, ಪಕೀರಪ್ಪ ಕಡಲಬಾಳು, ಗಣೇಶ್ ಅಲಬೂರು, ಏಳುಕೋಟಿ ದೂಪದಹಳ್ಳಿ, ಬಸವ ಕೇಚ್ಚಿನಬಂಡಿ, ದೊಡ್ಡಬಸವರಾಜ್ ಬನ್ನಿಗೋಳ, ತಂಬ್ರಳ್ಳಿ ಮರಿಯಪ್ಪ, ರಮೇಶ್ ಮಾದೂರು, ತೀರ್ಥ ಪ್ರಸಾದ್ ಹಂಪಪಟ್ಟಣ, ಮಹಾಂತೇಶ್ ಕಡಲಬಾಳು, ಪರಶುರಾಮ್ ನಕ್ರಳ್, ಮೈಲಪ್ಪ ಅಂಕಸಮುದ್ರ ಹಾಗೂ ವಿಠ್ಠಲ್ ಮರಬ್ಬೀಹಾಳು ಅವರನ್ನು ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

## ನಿಧನ
## ಎಂ.ಎಂ. ಕಾಳೆ



**ಲಕ್ಷ್ಮೇಶ್ವರ:** ರಾಜ್ಯ ಉಗ್ರಾಣ ನಿಗಮದಲ್ಲಿ ಶಾಖಾ ವ್ಯವಸ್ಥಾಪಕರಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದ ರಾಮಗೇರಿ ಗ್ರಾಮದ ಎಂ.ಎಂ. ಕಾಳೆ (72) ಅವರು ಗುರುವಾರ ಹುಬ್ಬಳ್ಳಿಯಲ್ಲಿ ನಿಧನರಾದರು.

ಮೃತರು ಪತ್ನಿ, ಓರ್ವ ಪುತ್ರ, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಅವರ ಅಂತ್ಯಕ್ರಿಯೆಯು ಜುಲೈ 24ರಂದು (ಶುಕ್ರವಾರ) ಮಧ್ಯಾಹ್ನ 12 ಗಂಟೆಗೆ ಸ್ವಗ್ರಾಮ ರಾಮಗೇರಿಯಲ್ಲಿ ನೆರವೇರಲಿದೆ ಎಂದು ಕುಟುಂಬದವರು ತಿಳಿಸಿದ್ದಾರೆ.

## ಬಿ.ಕಾಂ ಫಲಿತಾಂಶದಲ್ಲಿ ಬಸವೇಶ್ವರ ಕಾಲೇಜಿನ ವಿದ್ಯಾರ್ಥಿಗಳ ಸಾಧನೆ

**ವಿಜಯಸಾಕ್ಷಿ ಸುದ್ದಿ, ಗದಗ**

ಸ್ಥಳೀಯ ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಬಸವೇಶ್ವರ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯದ ಬಿ.ಕಾಂ 6ನೇ ಸೆಮಿಸ್ಟರ್ ವಿದ್ಯಾರ್ಥಿಗಳು ಜೂನ್‌ಜುಲೈ 2026ರಲ್ಲಿ ನಡೆದ ಕರ್ನಾಟಕ ವಿಶ್ವವಿದ್ಯಾಲಯದ ಪದವಿ ಪರೀಕ್ಷೆಯಲ್ಲಿ ಶೇ.80ರಷ್ಟು ಉತ್ತಮ ಫಲಿತಾಂಶ ದಾಖಲಿಸಿದ್ದಾರೆ.

ಪರೀಕ್ಷೆಯಲ್ಲಿ ಪ್ರೀತಿ ಧಮನಿ ಶೇ.91 ಅಂಕಗಳೊಂದಿಗೆ ಪ್ರಥಮ ಸ್ಥಾನ, ಸವಿತಾ ಗುರುಜಲಕರ ಶೇ.90 ಅಂಕಗಳೊಂದಿಗೆ ದ್ವಿತೀಯ ಸ್ಥಾನ ಹಾಗೂ ದರ್ಶನ ಮಾದರ ಶೇ.87.6 ಅಂಕಗಳೊಂದಿಗೆ ತೃತೀಯ ಸ್ಥಾನ ಪಡೆದಿದ್ದಾರೆ. ಅಲ್ಲದೆ, ಕೆಲವು ವಿದ್ಯಾರ್ಥಿಗಳು ಐ.ಟಿ.ಆರ್. ವಿಷಯದಲ್ಲಿ 100ಕ್ಕೆ 100 ಅಂಕಗಳನ್ನು ಗಳಿಸಿ ವಿಶೇಷ ಸಾಧನೆ ಮಾಡಿದ್ದಾರೆ.

ಒಟ್ಟಾರೆ ಫಲಿತಾಂಶದಲ್ಲಿ 42 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್ ಹಾಗೂ 13 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಯನ್ನು ಸಂಸ್ಥೆಯ ಕಾರ್ಯದರ್ಶಿ ಎಸ್.ಎಸ್. ಪಟ್ಟಣಶೆಟ್ಟರ, ಸ್ಥಾನಿಕ ಆಡಳಿತ ಮಂಡಳಿಯ ಸರ್ವ ಸದಸ್ಯರು, ಪ್ರಾ. ಎಂ.ಎನ್. ಬುರಡಿ ಹಾಗೂ ಕಾಲೇಜಿನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಅಭಿನಂದಿಸಿದ್ದಾರೆ.

### ಹರಪನಹಳ್ಳಿ ಹೊಸ ಮಾರ್ಗ, ಬಳ್ಳಾರಿ-ಹುಬ್ಬಳ್ಳಿ-ವಿಜಯಪುರಕ್ಕೆ ಹೆಚ್ಚುವರಿ ರೈಲು ಸೇವೆಗೆ ಗದಗ ಜಿಲ್ಲಾ ವಿಕಾಸ ವೇದಿಕೆ ಮನವಿ

# ಗದಗದಿಂದ ರೈಲು ಸಂಚಾರ ವಿಸ್ತರಣೆಗೆ ಒತ್ತಾಯ

**ವಿಜಯಸಾಕ್ಷಿ ಸುದ್ದಿ, ಗದಗ**

ಉತ್ತರ ಕರ್ನಾಟಕದ ರೈಲು ಸಂಪರ್ಕವನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಗದಗಹರಪನಹಳ್ಳಿ ನೂತನ ರೈಲು ಮಾರ್ಗದ ಕಾಮಗಾರಿ ತ್ವರಿತಗೊಳಿಸುವುದು, ಬಳ್ಳಾರಿಗದಗಹುಬ್ಬಳ್ಳಿ ಹಾಗೂ ವಿಜಯಪುರ ಮಾರ್ಗಗಳಿಗೆ ಹೊಸ ರೈಲುಗಳನ್ನು ಆರಂಭಿಸುವುದು ಸೇರಿದಂತೆ ಹಲವು ಮಹತ್ವದ ಬೇಡಿಕೆಗಳನ್ನು ಗದಗ ಜಿಲ್ಲಾ ವಿಕಾಸ ವೇದಿಕೆ ನೈರುತ್ಯ ರೈಲ್ವೆ ಇಲಾಖೆಯ ಮುಂದೆ ಮಂಡಿಸಿದೆ.

ವೇದಿಕೆ ಅಧ್ಯಕ್ಷ ವಿಶ್ವನಾಥ ಖಾನಾಪೂರ ಅವರು ನೈರುತ್ಯ ರೈಲ್ವೆ ಇಲಾಖೆಯ ಅಧಿಕಾರಿಯಾದ ಮನೋಜ್ ಬಾಗಡೆ ಅವರಿಗೆ ಮನವಿ ಸಲ್ಲಿಸಿ, ಗದಗಹರಪನಹಳ್ಳಿ ರೈಲು ಮಾರ್ಗದ ಕಾಮಗಾರಿ ಶೀಘ್ರ ಆರಂಭಿಸಬೇಕು ಎಂದು ಒತ್ತಾಯಿಸಿದರು.

ಗದಗ-ಯಲವಗಿ, ಗದಗ-ವಾಡಿ ಹಾಗೂ ಗದಗ-ಕೃಷ್ಣ ಮಾರ್ಗಗಳ ಸರ್ವೆಗೆ ಈಗಾಗಲೇ ಅನುದಾನ ಘೋಷಣೆಯಾಗಿದ್ದು, ವಿಳಂಬ ಮಾಡದೆ ಸರ್ವೆ ಕಾರ್ಯ ಆರಂಭಿಸಬೇಕು ಎಂದು ಮನವಿಯಲ್ಲಿ ತಿಳಿಸಿದ್ದಾರೆ.

ಪಂಡರಾಪುರವಿಜಯಪುರವೈಸೂರು ಗೋಲಗುಂಬಜ್ ಎಕ್ಸ್‌ಪ್ರೆಸ್ ರೈಲನ್ನು ಹಿಂದಿನಂತೆ ಗದಗಹುಬ್ಬಳ್ಳಿ ಮುಖ್ಯ ಜಂಕ್ಷನ್



ಮೂಲಕವೇ ಸಂಚರಿಸುವಂತೆ ಕ್ರಮ ಕೈಗೊಳ್ಳಬೇಕು. ಗದಗ ಹಾಗೂ ಕೊಪ್ಪಳ ಜಿಲ್ಲೆಗಳ ಸಾವಿರಾರು ಭಕ್ತರು ಪಂಡರಾಪುರಕ್ಕೆ ಸಂಚರಿಸುವ ಹಿನ್ನೆಲೆಯಲ್ಲಿ ಈ ರೈಲು ಮಾರ್ಗ ಅತ್ಯಂತ ಅವಶ್ಯಕವಾಗಿದೆ ಎಂದು ವಿವರಿಸಿದರು.

ಬಳ್ಳಾರಿಯಿಂದ ಗದಗ, ಹುಬ್ಬಳ್ಳಿ, ಬಾಗಲಕೋಟೆ ಹಾಗೂ ವಿಜಯಪುರ ಕಡೆಗೆ ಬೆಳಿಗ್ಗೆ ಮತ್ತು ಸಂಜೆ ವೇಳೆಯಲ್ಲಿ ಸಮರ್ಪಕ ರೈಲುಗಳಿಲ್ಲ. ಬೆಳಿಗ್ಗೆ 6 ಗಂಟೆಯ ನಂತರ ಮಧ್ಯಾಹ್ನ 3.55ರವರೆಗೆ ಹುಬ್ಬಳ್ಳಿ ಮಾರ್ಗಕ್ಕೆ ಯಾವುದೇ ರೈಲು ಇಲ್ಲದಿರು ವುದು ಪ್ರಯಾಣಿಕರಿಗೆ ತೀವ್ರ ತೊಂದರೆ ಉಂಟು ಮಾಡುತ್ತಿದೆ. ಆದ್ದರಿಂದ ಗುಂತಕಲ್ ಅಥವಾ ಚಿತ್ರದುರ್ಗ ರಾಯದುರ್ಗಬಳ್ಳಾರಿಹೊಸಪೇಟೆಕೊಪ್ಪಳಗದ 'ಗಹುಬ್ಬಳ್ಳಿ ಮಾರ್ಗವಾಗಿ ಹೊಸ ರೈಲುಗಳನ್ನು ಆರಂಭಿಸಬೇಕು ಎಂದು ಆಗ್ರಹಿಸಿದರು.

ಗದಗ ಈಗ ಪ್ರಮುಖ ರೈಲ್ವೆ ಜಂಕ್ಷನ್ ಆಗಿದ್ದು, ಬಾಗಲಕೋಟೆ ಹಾಗೂ ವಿಜಯಪುರ ಮಾರ್ಗಕ್ಕೂ ಹೊಸ ರೈಲುಗಳನ್ನು ನೀಡಿದರೆ ಕೈಗಾರಿಕೆ, ವ್ಯಾಪಾರ, ಪ್ರವಾಸೋದ್ಯಮ ಮತ್ತು ಸಾರ್ವಜನಿಕ ಸಂಚಾರಕ್ಕೆ ಹೊಸ ಚೈತನ್ಯ ಸಿಗಲಿದೆ ಎಂದು ತಿಳಿಸಿದರು.

ಇತ್ತೀಚೆಗೆ ಪೂರ್ಣಗೊಂಡಿರುವ ಗದಗ ಸೊಲ್ಲಾಪುರ ಡಬ್ಲಿಂಗ್ ಯೋಜನೆ ಉದ್ಘಾಟನೆಗೆ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ ಹಾಗೂ ರಾಜ್ಯ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಅವರನ್ನು ಆಹ್ವಾನಿಸಿ, ಉತ್ತರ ಕರ್ನಾಟಕ ಭಾಗಕ್ಕೆ

**ಗದಗ ಉತ್ತರ ಕರ್ನಾಟಕದ ಪ್ರಮುಖ ರೈಲ್ವೆ ಜಂಕ್ಷನ್ ಆಗಿದೆ. ಹರಪನಹಳ್ಳಿ ಹೊಸ ರೈಲು ಮಾರ್ಗದ ಕಾಮಗಾರಿ ತ್ವರಿತಗೊಳಿಸುವುದರ ಜೊತೆಗೆ ಬಳ್ಳಾರಿ, ಹುಬ್ಬಳ್ಳಿ ಮತ್ತು ವಿಜಯಪುರಕ್ಕೆ ಹೆಚ್ಚಿನ ರೈಲುಗಳನ್ನು ಆರಂಭಿಸಿದರೆ ಈ ಭಾಗದ ಅಭಿವೃದ್ಧಿಗೆ ಹೊಸ ವೇಗ ಸಿಗಲಿದೆ.**

– **ವಿಶ್ವನಾಥ ಖಾನಾಪೂರ**, ಅಧ್ಯಕ್ಷರು, ಗದಗ ಜಿಲ್ಲಾ ವಿಕಾಸ ವೇದಿಕೆ

ಇನ್ನಷ್ಟು ರೈಲು ಸೌಲಭ್ಯಗಳನ್ನು ಘೋಷಿಸುವಂತೆ ಮನವಿ ಮಾಡಲಾಗಿದೆ ಎಂದರು.

ಈ ಹಿಂದೆ ವಿಜಯನಗರ ಜಿಲ್ಲೆಯ ಅಧಿಕಾರಿಗಳು, ಬಳ್ಳಾರಿ ಲೋಕಸಭಾ ಸದಸ್ಯ ಈ. ತುಕಾರಾಂ ಹಾಗೂ ಕೊಪ್ಪಳ ಲೋಕಸಭಾ ಸದಸ್ಯ ರಾಜಶೇಖರ ಹಿಟ್ನಾಳ ಅವರಿಗೂ ಇದೇ ಬೇಡಿಕೆ ಕುರಿತು ಮನವಿ ಸಲ್ಲಿಸಲಾಗಿದೆ ಎಂದು ವಿಶ್ವನಾಥ ಖಾನಾಪೂರ ತಿಳಿಸಿದರು.

ಈ ಸಂದರ್ಭದಲ್ಲಿ ಗದಗಹರಪನಹಳ್ಳಿ ಹೋರಾ ಟ ಸಮಿತಿ ಅಧ್ಯಕ್ಷ ಬಸವರಾಜ ನವಲಗುಂದ, ರವಿಗೌಡ ಪಾಟೀಲ, ಧ್ರುವಕುಮಾರ ಹೂಗಾರ, ಬಸಪ್ಪ ವಡ್ಡರ, ಅಂದಾನಗೌಡ ಕುಲಕರ್ಣಿ, ವೀರಭದ್ರಪ್ಪ ಕಬ್ಬಿಣದ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಎಸ್‌ಐಆರ್ ಕಾರ್ಯ ಪರಿಶೀಲನೆಗೆ ಮನೆ-ಮನೆಗೆ ಭೇಟಿ ನೀಡಿದ ನಂದಾ ಹಣಬರಟ್ಟಿ

## ಶೇ.100 ಗುರಿಗೆ ಅಧಿಕಾರಿಗಳ ದಾಪುಗಾಲು



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಹಾಗೂ ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ಮತದಾರರ ನೋಂದಣಾಧಿಕಾರಿ ಡಾ. ನಂದಾ ಹಣಬರಟ್ಟಿ ಅವರು ಬಿಎಲ್ ಒಗಳೊಂದಿಗೆ ಪಟ್ಟಣದ ವಿವಿಧ ಮನೆಗಳಿಗೆ ಭೇಟಿ ನೀಡಿ ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಕಾರ್ಯವನ್ನು ಪರಿಶೀಲಿಸಿದರು.

ಮನೆಗಳಿಗೆ ತೆರಳಿ ಮತದಾರರಿಂದ ಎನ್ಯುಮರೇಷನ್ ಫಾರ್ಮ್ ಭರ್ತಿ, ದಾಖಲೆಗಳ ಪರಿಶೀಲನೆ ಹಾಗೂ ಡಿಜಿಟಲೀಕರಣ ಪ್ರಕ್ರಿಯೆಯನ್ನು ಅವಲೋಕಿಸಿದ ಅವರು, ಮತದಾರರೊಂದಿಗೆ ಮಾತನಾಡಿ ಯಾವುದೇ ಸಮಸ್ಯೆಗಳಿದ್ದರೆ ಪರಿಹರಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಮತದಾರರ ಪಟ್ಟಿ ಪರಿಷ್ಕರಣೆ ಪ್ರಜಾಪ್ರಭುತ್ವದ ಅಡಿಪಾಯವನ್ನು ಬಲಪಡಿಸುವ ಮಹತ್ವದ ಪ್ರಕ್ರಿಯೆಯಾಗಿದ್ದು, ಆಗಸ್ಟ್ 8ರೊಳಗೆ ಯಾವುದೇ ಅರ್ಹ ಮತದಾರರು ಮತದಾನದ ಹಕ್ಕಿನಿಂದ ವಂಚಿತರಾಗದಂತೆ ಹಾಗೂ ಅನರ್ಹರ ಹೆಸರು ಪಟ್ಟಿಯಲ್ಲಿ ಉಳಿಯದಂತೆ ಕಾರ್ಯ ಪೂರ್ಣಗೊಳಿಸಬೇಕು ಎಂದರು.

ಲಕ್ಷ್ಮೇಶ್ವರ ತಾಲೂಕಿನಲ್ಲಿ 96,016 ಮತದಾರರ ಪೈಕಿ ಇದುವರೆಗೆ 74,067 ಮತದಾರರ ಮಾಹಿತಿಯ ಡಿಜಿಟಲೀಕರಣ ಪೂರ್ಣಗೊಂಡಿದ್ದು, ಶೇ.87ರಷ್ಟು ಪ್ರಗತಿ ಸಾಧಿಸಲಾಗಿದೆ. ಈ ಸಾಧನೆಯಲ್ಲಿ ಬಿಎಲ್ ಒಗಳು ಹಾಗೂ ಮೇಲ್ವಿಚಾರಕರ ಶ್ರಮ ಪ್ರಮುಖವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಶೇ.100 ಪ್ರಗತಿ ಸಾಧಿಸಿರುವ ಬಿಎಲ್‌ಒಗಳ ಕಾರ್ಯವನ್ನು ಶ್ಲಾಘಿಸಿದ ಅವರು, ಉಳಿದ ಸಿಬ್ಬಂದಿಯೂ ಇದೇ ರೀತಿಯ ಬದ್ಧತೆಯಿಂದ ಕಾರ್ಯನಿರ್ವಹಿಸಿ ಗಡುವಿನೊಳಗೆ ಶೇ.100 ಗುರಿ ತಲುಪುವಂತೆ ಸೂಚಿಸಿದರು. ಅಗತ್ಯವಿದ್ದಲ್ಲಿ ಹೆಚ್ಚುವರಿ ಸಿಬ್ಬಂದಿ ಹಾಗೂ ತಾಂತ್ರಿಕ ನೆರವು ಒದಗಿಸಲಾಗುವುದು ಎಂದರು.

**ಎಸ್‌ಐಆರ್ ಪ್ರಕ್ರಿಯೆ ಯಶಸ್ವಿಗೊಳಿಸಲು ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಜಾಗೃತಿ ಕಾರ್ಯಕ್ರಮಗಳು, ಸಭೆಗಳು ಮತ್ತು ಪ್ರಚಾರ ನಡೆಸಲಾಗಿದೆ. ಉದ್ಯೋಗ ನಿಮಿತ್ತ ಹೊರಗಿರುವ ಮತದಾರರ ಮಾಹಿತಿಯನ್ನೂ ಕುಟುಂಬ ಸದಸ್ಯರಿಂದ ಪಡೆದು ಎನ್ಯುಮರೇಷನ್ ಫಾರ್ಮ್ ಭರ್ತಿ ಮಾಡಿಕೊಳ್ಳಲಾಗುತ್ತಿದೆ. ಶೇ.100ರಷ್ಟು ಗುರಿ ಸಾಧಿಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ.**

– **ಧನಂಜಯ ಎಂ.**, ತಹಸೀಲ್ದಾರ್, ಲಕ್ಷ್ಮೇಶ್ವರ

ಈ ಸಂದರ್ಭದಲ್ಲಿ ತಾಲೂಕು ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಗೋಪಾಲ ನಾಯಕ, ಪದ್ಮರಾಜ ಪಾಟೀಲ, ಜೆ.ಆರ್. ಕೊಪ್ಪದ, ರಾಮು ಅಡಗಿಮನಿ, ಜೆ.ಎ. ಮನಿಯಾರ, ಪ್ರಶಾಂತ ಸನದಿ, ಸುಬೇದಖಾನ ಪಠಾಣ, ಬಿಎಲ್‌ಒಗಳಾದ ಮಂಜುಳಾ ಚತ್ರದ ಹಾಗೂ ಶಿಲ್ಪಾ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಜಾನಕಿಯವರ ಅಮರ ಗಾಯನಕ್ಕೆ ರೆಡ್ಡಿ ಮಹಿಳಾ ಸಂಘದಿಂದ ಸಂಗೀತ ನಮನ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ರೆಡ್ಡಿ ಮಹಿಳಾ ಸಂಘದ ವತಿಯಿಂದ ಖ್ಯಾತ ಹಿನ್ನೆಲೆ ಗಾಯಕಿ ಡಾ. ಎಸ್. ಜಾನಕಿ ಅವರ ಗೌರವಾರ್ಥ ನಗರದ ಕಳಸಾಪುರ ರಸ್ತೆಯ ಶ್ರೀ ವಿಘ್ನೇಶ್ವರ ದೇವಸ್ಥಾನದಲ್ಲಿ ನುಡಿ ನಮನ ಕಾರ್ಯಕ್ರಮವನ್ನು ಭಾವಪೂರ್ಣವಾಗಿ ಆಯೋಜಿಸಲಾಯಿತು.

ಕಾರ್ಯಕ್ರಮವು ಕವಿತಾ ಕೊಣ್ಣೂರ ಅವರ ಪ್ರಾರ್ಥನಾ ಗೀತೆಯೊಂದಿಗೆ ಆರಂಭಗೊಂಡಿತು. ಆಶಾ ಓದುಗೌಡರ ಸ್ವಾಗತಿಸಿದರು. ವೀಣಾ ತಿರ್ಲಾಪುರ ಪ್ರಾಸ್ತಾವಿಕವಾಗಿ ಮಾತನಾಡಿ, ಡಾ. ಎಸ್. ಜಾನಕಿ ಅವರ ಸಂಗೀತ ಸೇವೆ ಹಾಗೂ ಭಾರತೀಯ ಚಿತ್ರರಂಗಕ್ಕೆ ನೀಡಿದ ಕೊಡುಗೆಯನ್ನು ಸ್ಮರಿಸಿದರು.

ಸುನೀತಾ ಕೋನರೆಡ್ಡಿ ಮಾತನಾಡಿ, ಜಾನಕಿ ಅವರ ಸುಮಧುರ ಕಂಠಸಿರಿ, ಸರಳ ವ್ಯಕ್ತಿತ್ವ ಹಾಗೂ ಸಂಗೀತ ಕ್ಷೇತ್ರಕ್ಕೆ ನೀಡಿದ ಅಪಾರ ಕೊಡುಗೆಯನ್ನು ಸ್ಮರಿಸಿದರು. ಅವರ ಹಾಡುಗಳು ಹಲವು ತಲೆಮಾರುಗಳ ಸಂಗೀತ ಪ್ರಿಯರ ಮನದಲ್ಲಿ ಶಾಶ್ವತವಾಗಿ ಉಳಿಯಲಿವೆ ಎಂದು ಹೇಳಿದರು.

ಮುಖ್ಯ ಭಾಷಣ ಮಾಡಿದ ಸುಧಾ ಹುಚ್ಚಣ್ಣವರ, ಡಾ. ಎಸ್. ಜಾನಕಿ ಅವರ ಬಾಲ್ಯ, ಸಂಗೀತ ಪಯಣ, ದಕ್ಷಿಣ ಭಾರತದ ಹೆಸರಾಂತ ಹಿನ್ನೆಲೆ ಗಾಯಕಿಯಾಗಿ ಬೆಳೆದ ಸಾಧನೆ ಹಾಗೂ ಐದು ದಶಕಗಳಿಗೂ ಹೆಚ್ಚು ಕಾಲ ಭಾರತೀಯ ಚಿತ್ರರಂಗಕ್ಕೆ ಸಲ್ಲಿಸಿದ ಸೇವೆಯನ್ನು ವಿವರಿಸಿದರು.

ಬಳಿಕ ಸಂಘದ ಸದಸ್ಯೆಯರು ಡಾ. ಎಸ್. ಜಾನಕಿ ಅವರು ಹಾಡಿರುವ ಜನಪ್ರಿಯ ಗೀತೆಗಳನ್ನು ಸಾಮೂಹಿಕವಾಗಿ ಹಾಡುವ ಮೂಲಕ ಸಂಗೀತ ದಿಗ್ಗಜರಿಗೆ ಭಾವಪೂರ್ಣ ನಮನ ಸಲ್ಲಿಸಿದರು.

ಕಾರ್ಯಕ್ರಮದ ಕೊನೆಯಲ್ಲಿ ವಿದ್ಯಾ ಕೊಳ್ಳಿ ವಂದನಾರ್ಪಣೆ ಸಲ್ಲಿಸಿದರು.

ಕಾರ್ಯಕ್ರಮವನ್ನು ಸುನೀತಾ ಕೋನರೆಡ್ಡಿ, ಶ್ರೀದೇವಿ ಇನಾಮತಿ, ಲಕ್ಷ್ಮೀ ಸೋಮನಗೌಡರ ಹಾಗೂ ಶೋಭಾ ಪಾಟೀಲ ಆಯೋಜಿಸಿದ್ದರು.

ಈ ಸಂದರ್ಭದಲ್ಲಿ ಕವಿತಾ ಪಾಟೀಲ, ಸವಿತಾ ಹೊಸಮನಿ, ಜಯಾ ಕೆಂಚರೆಡ್ಡಿ, ಸುರೇಖಾ ಇನಾಮತಿ, ಗಂಗಮ್ಮ ದೇಸಾಯಿ, ಸೌಮ್ಯಾ ಹುಚ್ಚಣ್ಣವರ, ಲತಾ ಮುಂಬಾರೆಡ್ಡಿ, ವಿಜಯಲಕ್ಷ್ಮೀ ಅಳಗವಾಡಿ ಸೇರಿದಂತೆ ಸಂಘದ ಅನೇಕ ಸದಸ್ಯೆಯರು ಉಪಸ್ಥಿತರಿದ್ದರು.

### ಮುಂಡರಗಿಯಲ್ಲಿ ಆಷಾಢ ಮಾಸದ ಧಾರ್ಮಿಕ ಕಾರ್ಯಕ್ರಮಗಳ ಆರಂಭ | ಆ.2ರಂದು ಎಂ. ವೆಂಕಟೇಶ ಕುಮಾರ್ ಸಂಗೀತ ಸಂಜೆ

## ಜು.26ರಿಂದ ಸಿದ್ಧಲಿಂಗೇಶ್ವರರ ಚರಿತಾಮೃತ ಪ್ರವಚನ



**ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ಪಟ್ಟಣದ ಶ್ರೀ ಜಗದ್ಗುರು ತೋಂಟದಾರ್ಯ ಶಾಖಾಮಠದಲ್ಲಿ ಆಷಾಢ ಮಾಸದ ಅಂಗವಾಗಿ ನಡೆಯುವ ವಾರ್ಷಿಕ ಧಾರ್ಮಿಕ ಕಾರ್ಯಕ್ರಮಗಳು ಜುಲೈ 26ರಿಂದ ಆರಂಭವಾಗಲಿದ್ದು, ಈ ಬಾರಿ ಎಡೆಯೂರು ಶ್ರೀ ತೋಂಟದ ಸಿದ್ಧಲಿಂಗೇಶ್ವರರ ಚರಿತಾಮೃತ ಕುರಿತ ಪ್ರವಚನ ನಡೆಯಲಿದೆ ಎಂದು ಪ್ರವಚನ ಸಮಿತಿ ಅಧ್ಯಕ್ಷ ಸಿ.ಕೆ. ಗಣಪ್ಪನವರ ತಿಳಿಸಿದರು.

ಶ್ರೀಮಠದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರತಿದಿನ ಸಂಜೆ 7 ಗಂಟೆಗೆ ಪೂಜ್ಯ ನಿಜಗುಣಪ್ರಭು ತೋಂಟದಾರ್ಯ ಮಹಾಸ್ವಾಮಿಗಳ ಸಾನ್ನಿಧ್ಯದಲ್ಲಿ ಪ್ರವಚನ ನಡೆಯಲಿದ್ದು, ಬಸವಬೆಳವಿಯ ವಿರಕ್ತಮಠದ ಪೂಜ್ಯ ಶರಣಬಸವ ಅಪ್ಪಗಳು ಪ್ರವಚನ ನೀಡಲಿದ್ದಾರೆ ಎಂದು ಹೇಳಿದರು.

ಜುಲೈ 26ರಂದು ನಡೆಯುವ ಉದ್ಘಾಟನಾ ಸಮಾರಂಭದಲ್ಲಿ ಶರಣೆ ರತ್ನಾ ಮಹಾಲಿಂಗಯ್ಯಳಗಿ ಕಾರ್ಯಕ್ರಮ ಉದ್ಘಾಟಿಸಲಿದ್ದು, ಕಸ್ತೂರೆವ್ವ ಈ. ನಾವಿ ಅಧ್ಯಕ್ಷತೆ ವಹಿಸಲಿದ್ದಾರೆ. ಮಾಜಿ ಸಚಿವ ಎಸ್.ಎಸ್. ಪಾಟೀಲ, ಶಾಸಕರಾದ ಜಿ.ಎಸ್. ಪಾಟೀಲ ಮತ್ತು ಡಾ. ಚಂದ್ರು ಲಮಾಣಿ, ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ ಸೇರಿದಂತೆ ಹಲವಾರು ಗಣ್ಯರು ಭಾಗವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ತಾಪಂ ಕಾರ್ಯನಿರ್ವಾಹಕ ಅಧಿಕಾರಿ ವಿಜಯಕುಮಾರ ಬೆಣ್ಣಿ, ಸಿಪಿಐ ಅಯ್ಯನಗೌಡ ಪಾಟೀಲ, ಅಬಕಾರಿ ಇನ್ಸ್‌ಪೆಕ್ಟರ್ ರಮೇಶ ಅಗಡಿ, ಆಹಾರ ನಿರೀಕ್ಷಕ ಎನ್.ಆರ್. ಚಿನ್ನಪ್ಪಗೌಡರ, ಶರಣ ಸಾಹಿತ್ಯ ಪರಿಷತ್ ತಾಲೂಕು ಅಧ್ಯಕ್ಷ ಡಾ. ಈರಣ್ಣ ಮಡಿವಾಳರ ಹಾಗೂ ಹಿರಿಯ ರೈತ ಕೊಟ್ರಗೌಡ ಪಾಟೀಲ ಅವರನ್ನು ಸನ್ಮಾನಿಸಲಾಗುವುದು.

ಸುಮಾರು ₹5 ಕೋಟಿ ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ಕಲ್ಯಾಣ ಮಂಟಪ ಇದೇ ವರ್ಷ ಉದ್ಘಾಟನೆಯಾಗುವ ನಿರೀಕ್ಷೆಯಿದೆ ಎಂದು ಅವರು ತಿಳಿಸಿದರು.

ಶ್ರೀಮಠದ ಹಿರಿಯ ಭಕ್ತ ಕೊಟ್ರೇಶ

**ಮಾಸದ ಪ್ರವಚನದ ಮೂಲಕ ಧಾರ್ಮಿಕ ಮತ್ತು ಸಾಂಸ್ಕೃತಿಕ ಮೌಲ್ಯಗಳನ್ನು ಜನರಿಗೆ ತಲುಪಿಸುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಪ್ರತಿವರ್ಷ ಆಯೋಜಿಸಲಾಗುತ್ತಿದೆ.**

– **ಸಿ.ಕೆ. ಗಣಪ್ಪನವರ**, ಅಧ್ಯಕ್ಷರು, ಪ್ರವಚನ ಸಮಿತಿ

ಅಂಗಡಿ ಮಾತನಾಡಿ, ಪ್ರವಚನದ ವೇಳೆ ಕಲ್ಯಾಣಕುಮಾರ ಹಾರಕೂಡ ಸಂಗೀತ ಸೇವೆ ಸಲ್ಲಿಸಲಿದ್ದು, ರಮೇಶ ಕಟ್ಟಿಸಂಗಾವಿ ತಬಲಾ ಹಾಗೂ ನಾದಶ್ರೀ ಷಣ್ಮುಖಯ್ಯ ಹಿರೇಮಠ ವಯೋಲಿನ್ ಸಾಥ್ ನೀಡಲಿದ್ದಾರೆ ಎಂದು ಹೇಳಿದರು.

ಜುಲೈ 29ರಂದು ಶ್ರೀ ಹಡಪದ ಅಪ್ಪಣ್ಣ ಜಯಂತಿ, ಆಗಸ್ಟ್ 2ರಂದು ಪದ್ಮಭೂಷಣ ಎಂ. ವೆಂಕಟೇಶ ಕುಮಾರ್ ಅವರ ಸಂಗೀತ ಕಾರ್ಯಕ್ರಮ ಹಾಗೂ ಆಗಸ್ಟ್ 6ರಂದು ಅಕ್ಕ ಅಂಗಾರ, ತಂಗಿ ಬಂಗಾರ ಹಾಸ್ಯ ನಾಟಕ ಪ್ರದರ್ಶನ ಆಯೋಜಿಸಲಾಗಿದೆ ಎಂದು ಮಾಹಿತಿ ನೀಡಿದರು.

### ಉಚಿತ ಹೊಲಿಗೆ ಯಂತ್ರ ಮಾರಾಟ ಮಾಡಿದರೆ ಯೋಜನೆಗಳಿಂದಲೂ ವಂಚನೆ: ಶಾಸಕ ಡಾ. ಚಂದ್ರು ಲಮಾಣಿ

## ಸರ್ಕಾರದ ಸೌಲಭ್ಯದ ದುರ್ಬಳಕೆ ಮಾಡಿದರೆ ಕ್ರಮ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸರ್ಕಾರದಿಂದ ಉಚಿತವಾಗಿ ನೀಡಲಾಗುತ್ತಿರುವ ಹೊಲಿಗೆ ಯಂತ್ರಗಳನ್ನು ಯಾವುದೇ ಕಾರಣಕ್ಕೂ ಮಾರಾಟ ಮಾಡಬಾರದು. ಮಾರಾಟ ಮಾಡಿರುವುದು ಕಂಡುಬಂದರೆ ಸಂಬಂಧಿಸಿದ ಫಲಾನುಭವಿಗಳ ವಿರುದ್ಧ ಕ್ರಮ ಕೈಗೊಳ್ಳುವುದರ ಜೊತೆಗೆ, ಮುಂದಿನ ದಿನಗಳಲ್ಲಿ ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯಗಳಿಂದಲೂ ವಂಚಿತರಾಗುವ ಸಾಧ್ಯತೆ ಇದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಎಚ್ಚರಿಕೆ ನೀಡಿದರು.

ತಾಲೂಕು ಪಂಚಾಯಿತಿ ಕಾರ್ಯಾಲಯದಲ್ಲಿ ಬುಧವಾರ ದೇವರಾಜ ಅರಸು ಅಭಿವೃದ್ಧಿ ನಿಗಮದ ವತಿಯಿಂದ ಮಂಜೂರಾದ ಉಚಿತ ಹೊಲಿಗೆ ಯಂತ್ರಗಳನ್ನು ಅರ್ಹ ಫಲಾನುಭವಿ ಮಹಿಳೆಯರಿಗೆ ವಿತರಿಸಿ ಅವರು ಮಾತನಾಡಿದರು.

ಆರ್ಥಿಕವಾಗಿ ಹಿಂದುಳಿದ ಮಹಿಳೆಯರು ಸ್ವಾವಲಂಬಿಗಳಾಗಿ, ಸ್ವಂತ ಉದ್ಯೋಗದ ಮೂಲಕ ಕುಟುಂಬದ ಆದಾಯ ಹೆಚ್ಚಿಸಿಕೊಳ್ಳುವ ಉದ್ದೇಶದಿಂದ ಸರ್ಕಾರ ತರಬೇತಿ ಪಡೆದ ಮಹಿಳೆಯರಿಗೆ ಉಚಿತ ಹೊಲಿಗೆ ಯಂತ್ರಗಳನ್ನು ವಿತರಿಸುತ್ತಿದೆ. ಫಲಾನುಭವಿಗಳು ಈ ಸೌಲಭ್ಯದ ಸದ್ಬಳಕೆ ಮಾಡಿಕೊಂಡು ತಮ್ಮ ಜೀವನಮಟ್ಟವನ್ನು ಸುಧಾರಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಮಂಜುಳಾ ಹಕಾರಿ, ದೇವರಾಜ ಅರಸು ಅಭಿವೃದ್ಧಿ ನಿಗಮದ ಅಧಿಕಾರಿ ಪ್ರದೀಪ ಕೊಣ್ಣೂರ, ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಸಹಾಯಕ ನಿರ್ದೇಶಕ ಕೃಷ್ಣಪ್ಪ ಧರ್ಮರ, ಗಿರೀಶ ಚೌರಡ್ಡಿ, ಬಸವರಾಜ ಚಕ್ರಸಾಲಿ, ರಮೇಶ ಲಮಾಣಿ ಸೇರಿದಂತೆ ಅಧಿಕಾರಿಗಳು ಹಾಗೂ ಫಲಾನುಭವಿಗಳು ಉಪಸ್ಥಿತರಿದ್ದರು.

### ಒಬ್ಬ ರೋಟೇರಿಯನ್, ಒಂದು ಮರ ಅಭಿಯಾನಕ್ಕೆ ತೆರೆ

## ಸಸಿ ನೆಡುವುದಲ್ಲ, ಪೋಷಿಸುವುದೇ ನಿಜವಾದ ಪರಿಸರ ಸೇವೆ




**ವಿಜಯಸಾಕ್ಷಿ ಸುದ್ದಿ, ಗದಗ**

ಪರಿಸರ ಸಂರಕ್ಷಣೆಯಲ್ಲಿ ಪ್ರತಿಯೊಬ್ಬ ನಾಗರಿಕನ ಪಾತ್ರ ಮಹತ್ವದ್ದಾಗಿದ್ದು, ಮರಗಳನ್ನು ನೆಟ್ಟು ಅವುಗಳನ್ನು ಪೋಷಿಸುವ ಮೂಲಕವೇ ಪ್ರಕೃತಿಯ ಸಮತೋಲನ ಕಾಪಾಡಲು ಸಾಧ್ಯ ಎಂದು ಒಬ್ಬ ರೋಟೇರಿಯನ್, ಒಂದು ಮರ ಉಚಿತ ಸಸಿ ವಿತರಣಾ ಅಭಿಯಾನದ ಇವೆಂಟ್ ಚೇರ್ಮನ್ ಸುರೇಶ ಕುಂಬಾರ ಹೇಳಿದರು.

ನಗರದ ಜಿಲ್ಲಾ ಕ್ರೀಡಾಂಗಣದ ಎದುರಿನ ಶ್ರೀಮತಿ ಉಷಾದೇವಿ ಜಿ. ಕುಷ್ಟಗಿ ರೋಟರಿ ಕಮ್ಯುನಿಟಿ ಕೇರ್ ಸೆಂಟರ್‌ನಲ್ಲಿ ಆಯೋಜಿಸಿದ್ದ ಉಚಿತ ಸಸಿ ವಿತರಣಾ ಅಭಿಯಾನದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು. ಮರಗಳು ಪರಿಸರ ಸಂರಕ್ಷಣೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ. ಸಸಿ ನೆಡುವುದಷ್ಟೇ ಸಾಕಾಗುವುದಿಲ್ಲ, ಅವುಗಳನ್ನು ಮಗುವಿನಂತೆ ಆರೈಕೆ ಮಾಡಿ ಬೆಳೆಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದು ಹೇಳಿದರು. ಈ ಬಾರಿ ವಿತರಿಸಲಾದ ಸಸಿಗಳಿಗೆ ಕ್ಯೂಆರ್ ಕೋಡ್ ಅಳವಡಿಸಿ ಡಿಜಿಟಲ್ ಟ್ರ್ಯಾಕಿಂಗ್ ವ್ಯವಸ್ಥೆ ಜಾರಿಗೊಳಿಸಲಾಗಿದ್ದು, ಟ್ರೀ ಗಾರ್ಡಿಯನ್ ತಂಡವು ಪ್ರತಿ ಮೂರು ತಿಂಗಳಿಗೊಮ್ಮೆ ಸಸಿಗಳ ಬೆಳವಣಿಗೆಯನ್ನು ಪರಿಶೀಲಿಸಲಿದೆ ಎಂದು ಮಾಹಿತಿ ನೀಡಿದರು.

ಮುಖ್ಯ ಅತಿಥಿ ನರೇಶ್ ಜೈನ್ ಮಾತನಾಡಿ, ಹುಟ್ಟುಹಬ್ಬ, ವಿವಾಹ ವಾರ್ಷಿಕೋತ್ಸವ ಸೇರಿದಂತೆ ವಿಶೇಷ ಸಂದರ್ಭಗಳಲ್ಲಿ ಕೇಕ್ ಕತ್ತರಿಸುವ ಬದಲು ಒಂದು ಮರವನ್ನು ನೆಡುವ ಸಂಸ್ಕೃತಿಯನ್ನು ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು. ಅತಿಥಿಗಳಾಗಿ ಮಂಜುಳಾ ಅಕ್ಕಿ ಹಾಗೂ ಸನ್ಮತಿ ತಾಂತೆ ಭಾಗವಹಿಸಿದ್ದರು. ಸಸಿ ವಿತರಣಾ ಅಭಿಯಾನದ ಪ್ರಾಯೋಜಕರಾದ ನವೀನ್ ಕುಷ್ಟಗಿ, ನಾಗೇಶ ಹಂಜಗಿ ಹಾಗೂ ಸುರೇಶ ಕುಂಬಾರ ಅವರನ್ನು ಸನ್ಮಾನಿಸಲಾಯಿತು. ಪರಿಸರ ಅಭಿಯಾನಕ್ಕೆ ಕೈಜೋಡಿಸಿದ ಸ್ವಯಂಸೇವಕರಾದ ಆನಂದ ಮತ್ತು ಶರಣಬಸವರಾಜ ಕೆರಕನವರ ಅವರನ್ನೂ ಗೌರವಿಸಲಾಯಿತು. ಅಧ್ಯಕ್ಷತೆ ವಹಿಸಿ ಮಾತನಾಡಿದ ಗದಗ-ಬೆಟಗೇರಿ ರೋಟರಿ ಕ್ಲಬ್ ಅಧ್ಯಕ್ಷ ಡಾ. ಪ್ರದೀಪ ಉಗಲಾಟ, ಒಂದು ವಾರ ನಡೆದ ಸಸಿ ವಿತರಣಾ ಅಭಿಯಾನಕ್ಕೆ ಸಾರ್ವಜನಿಕರಿಂದ ಉತ್ತಮ ಸ್ಪಂದನೆ ದೊರೆತಿದೆ. ಸಸಿಗಳನ್ನು ಪಡೆದವರು ಅವುಗಳನ್ನು ಪೋಷಿಸಿ ಬೆಳೆಸಬೇಕು ಎಂದು ಮನವಿ ಮಾಡಿದರು. ಕಾರ್ಯಕ್ರಮದಲ್ಲಿ ವಿಶ್ವನಾಥ ಯಳಮಲಿ, ಮಹಾಂತೇಶ ಬಾತಾಖಾನಿ, ಶಿವಾಚಾರ್ಯ ಹೊಸಳ್ಳಿಮಠ, ಶ್ರೀಧರಗೌಡ ಧರ್ಮಾಯತ, ಎಚ್.ಎಸ್. ಪಾಟೀಲ, ಡಾ. ಆರ್.ಬಿ. ಗಚ್ಚಿನಮಠ, ಸಂತೋಷ ಅಕ್ಕಿ, ಡಾ. ಆರ್.ಆರ್.ಜಿ. ಉಪ್ಪಿನ, ನೀಲಾಂಬಿಕಾ ಉಗಲಾಟ ಸೇರಿದಂತೆ ಹಲವರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka